ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೭

**ಪಟ್ಟಿ – ೦೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆಂಟನೆಯ ಅಧಿವೇಶನ**

**ಗುರುವಾರ, ದಿನಾಂಕ : ೧೮ನೇ ಜುಲೈ, ೨೦೧೯**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಸಾರಿಗೆ ಸಚಿವರು.

೩. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೪. ಸಣ್ಣ ಕೈಗಾರಿಕೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಕ್ಕರೆ ಸಚಿವರು.

---

# ಸರ್ಕಾರಿ ನೌಕರರ ಪದೋನ್ನತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೮೬ (೫೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ನೌಕರರ/ಸಿಬ್ಬಂದಿಗಳ ಪದೋನ್ನತಿ ಕುರಿತು ಬಿ.ಕೆ. ಪವಿತ್ರ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನ ವಿವರವನ್ನು ಸಂಪೂರ್ಣ ವಿವರದೊಂದಿಗೆ ನೀಡುವುದು ; (ಪ್ರತಿ ನೀಡಿ)

(ಆ) ಪ್ರಸ್ತುತ ಎಲ್ಲಾ ಇಲಾಖೆಗಳಲ್ಲಿ ಪದೋನ್ನತಿ ಕಾರ್ಯ ನಡೆಯುತ್ತಿದೆಯೇ ; ಸುಪ್ರೀಂ ಕೋರ್ಟ್ ಆದೇಶದನ್ವಯ ಮುಂಬಡ್ತಿ ಹಾಗೂ ಹಿಂಬಡ್ತಿ ಮಾಡಿದ ನೌಕರರ ಸಂಖ್ಯೆಯನ್ನು ಇಲಾಖಾವಾರು ಒದಗಿಸುವುದು ;

(ಇ) ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಪದೋನ್ನತಿ ಇರದೇ ಪ್ರಭಾರತ್ವದ ಮೇಲೆ ಕಾರ್ಯ ನಡೆಯುತ್ತಿರುವ ಕಾರಣ ಆಡಳಿತ ಕುಸಿತ ಕಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಯಾವ ಸಮಯ ಮಿತಿಯೊಳಗೆ ಪದೋನ್ನತಿ ನೀಡಿ ಪೂರ್ಣ ಪ್ರಮಾಣದ ಅಧಿಕಾರಿಗಳನ್ನು ನೇಮಿಸಿ ವ್ಯವಸ್ಥೆ ಸುಧಾರಣೆ ಮಾಡಲಾಗುವುದು ?

# ನಾಗಮಂಗಲ ತಾಲ್ಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೭ (೫೫೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಹೊನಕೆರೆ ಹೋಬಳಿ ಗಂಗಸಮುದ್ರ ಎಲ್ಲೆ ಸರ್ವೆ ನಂ. ೧೪೩ ರಲ್ಲಿ ಮತ್ತು ಶ್ಯಾನುಬೋಗನಹಳ್ಳಿ ಗ್ರಾಮದ ಎಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಗ್ರಾಮಗಳ ಸರ್ವೆ ನಂಬರ್‌ಗಳಲ್ಲಿ ಅಕ್ರಮ ಗಣಿಗಾರಿಕೆ ನಡೆಸುತ್ತಿರುವ ಮಾಲೀಕರ ಹೆಸರು ಮತ್ತು ಅವರು ನಡೆಸುತ್ತಿರುವ ಗಣಿಗಾರಿಕೆ ಜಮೀನಿನ ವಿಸ್ತೀರ್ಣ ಎಷ್ಟು ; ಇದರಲ್ಲಿ ಅಕ್ರಮವಾಗಿ ಸರ್ಕಾರದ ಎಷ್ಟು ಭಾಗ ಬಳಸಿಕೊಂಡಿದ್ದಾರೆ ; ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿದ್ದರೂ ಕ್ರಮಕೈಗೊಳ್ಳದೆ ಇರುವುದಕ್ಕೆ ಕಾರಣ ಮತ್ತು ಕೈಗೊಂಡಿರುವ ಕ್ರಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರತಿ ದಿನ ರಾತ್ರಿ ಸಮಯ ಅಕ್ರಮವಾಗಿ ಗಣಿಗಾರಿಕೆಗೆ ಬಳಸುವ ಸಿಡಿಮದ್ದುಗಳಿಂದ ಸುತ್ತ–ಮುತ್ತ ವಾಸಿಸುವ ಗ್ರಾಮಗಳ ಮನೆಗಳು ಬಿರುಕುಗೊಂಡಿದ್ದು ಈ ಬಗ್ಗೆ ಗ್ರಾಮಸ್ಥರುಗಳು ನೀಡಿರುವ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

# ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೮ (೫೫೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಎಷ್ಟು ಗಣಿಗಾರಿಕೆಗಳನ್ನು ಇಲಾಖೆಯಿಂದ ಪರವಾನಗಿ ಪಡೆದು ನಡೆಸಲಾಗುತ್ತಿದೆ ; ಎಷ್ಟು ಗಣಿಗಾರಿಕೆಗಳು ಪರವಾನಗಿ ಪಡೆಯದೆ ಅಕ್ರಮವಾಗಿ ನಡೆಯುತ್ತಿವೆ ; (ತಾಲ್ಲೂಕುವಾರು ಮಾಲೀಕರ ಹೆಸರು ಮತ್ತು ವಿಳಾಸದೊಂದಿಗೆ ಸಂಪೂರ್ಣ ವಿವರವಾದ ಮಾಹಿತಿ ನೀಡುವುದು)

(ಆ) ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚು ನಷ್ಟ ಉಂಟಾಗುತ್ತಿಲ್ಲವೇ ; ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ರೀತಿಯ ಕ್ರಮಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಗಣಿಗಾರಿಕೆಗಳು ನಿರಂತರವಾಗಿ ನಡೆಯುತ್ತಿರುವುದರಿಂದ ಈ ಪ್ರದೇಶದ ಸುತ್ತ-ಮುತ್ತ ವಾಸಿಸುವ ಗ್ರಾಮಸ್ಥರು ಮತ್ತು ರೈತರು ಅತೀವ ಸಂಕಷ್ಟ ಅನುಭವಿಸುತ್ತಿರುವುದರ ಬಗ್ಗೆ ಇಲಾಖೆಗೆ ದೂರುಗಳು ಬಂದಿಲ್ಲವೆ ; ಎಲ್ಲಾ ದೂರುಗಳ ಪ್ರತಿ ನೀಡುವುದು ; ಈ ದೂರುಗಳಿಗೆ ಕೈಗೊಂಡ ಕ್ರಮಗಳೇನು ? (ವಿವರಗಳ ಮಾಹಿತಿಯನ್ನು ಒದಗಿಸುವುದು)

## ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೯ (೫೫೨) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ ;

(ಆ) ಮಂಡ್ಯ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಎಷ್ಟು ಜಮೀನನ್ನು ಗುರುತಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಅಭ್ಯರ್ಥಿಗಳು ಗುರುತಿಸಿರುವ ಜಮೀನಿನಲ್ಲಿ ಹೊಸದಾಗಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸ್ಥಳ ಪಡೆಯಲು ಇರುವ ಮಾನದಂಡಗಳು ಮತ್ತು ವಿಧಾನಗಳೇನು ?

## ರಾಜ್ಯದಲ್ಲಿ ಗಣಿಗಾರಿಕೆ ಹಾಗೂ ಗಣಿ ಸುರಕ್ಷತೆ ವಿಧಾನಗಳ ತರಬೇತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦ (೫೫೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗಣಿಗಾರಿಕೆ ಹಾಗೂ ಗಣಿ ಸುರಕ್ಷತೆ ವಿಧಾನಗಳ ತರಬೇತಿ ಕೋರ್ಸ್‌ನ್ನು ಯಾವ ಯಾವ ಜಿಲ್ಲೆಗಳಲ್ಲಿ ಆರಂಭಿಸಲಾಗಿದೆ ; ಹಾಗೂ ಯಾವ ಸಂಸ್ಥೆಯಿಂದ ತರಬೇತಿ ಆಯೋಜಿಸಿದೆ ;

(ಆ) ೨೦೧೮-೧೯ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಎಷ್ಟು ಮಂದಿಗೆ ಈವರೆಗೆ ತರಬೇತಿ ನೀಡಲಾಗಿದೆ ; ಯಾವ ತಜ್ಞರ ತಂಡದಿಂದ ತರಬೇತಿ ನೀಡಲಾಗುತ್ತಿದೆ ? (ತರಬೇತಿ ಪಡೆದವರ ವಿವರವಾದ ಮಾಹಿತಿ ನೀಡುವುದು)

## ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೨೯೧ (೩೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ಸರ್ಕಾರವು ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೂ ಅದಕ್ಕೆ ನೀಡಿರುವ ಅನುದಾನ ಎಷ್ಟು ; ಬಿಡುಗಡೆಯಾಗಿರುವ ಅನುದಾನ ಎಷ್ಟು ? (ಅನುದಾನ ಕುರಿತು ಜಿಲ್ಲಾವಾರು ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ಬರುವ ವಿದ್ಯುತ್ ಕೇಂದ್ರಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೨೯೨ (೩೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯಲ್ಲಿರುವ ಕಾಡ್ಲೂರು, ಆಶಾಪೂರ, ಗ್ರಾಮಗಳಲ್ಲಿ ಹಾಗೂ ಮಾನ್ವಿ ತಾಲ್ಲೂಕಿನಲ್ಲಿರುವ ಹರವಿ ಹಾಗೂ ಅಡವಿ ಅಮರೇಶ್ವರದಲ್ಲಿ ೧೧೦/೧೧ ಕೆ.ವಿ. ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ಉತ್ಪತ್ತಿಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ?

## ನೂತನ ಜಾಹೀರಾತು ನೀತಿ ಜಾರಿಗೆ ತರುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೨೯೩ (೩೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೮ನೇ ಸಾಲಿನಲ್ಲಿ ಪತ್ರಿಕಾ ಜಾಹೀರಾತು ನೀತಿ ಅಂತ್ಯಗೊಂಡಿರುವುದರಿಂದ ನೂತನ ಜಾಹೀರಾತು ನೀತಿ ಜಾರಿಗೆ ತರಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿ ಸ್ಥಳೀಯ ಪತ್ರಿಕೆಗಳನ್ನು ಪ್ರೋತ್ಸಾಹಿಸಲು ಹಾಗೂ ೩೭೧ಜೆ ಅನುಗುಣವಾಗಿ ಸೌಲಭ್ಯಗಳ ಬಗ್ಗೆ ಹಾಗೂ ಅಭಿವೃದ್ಧಿ ಅನುದಾನದ ಬಗ್ಗೆ ಮಾಹಿತಿ ನೀಡಲು ಸರ್ಕಾರ ತೆಗದಕೊಂಡ ಕ್ರಮಗಳೇನು ?

## ವಿವಿಧ ಮದ್ಯ ಪಾನೀಯಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೨೯೪ (೩೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯಲ್ಲಿ ಅಬಕಾರಿ ಇಲಾಖೆಯಿಂದ ಪ್ರತಿ ವರ್ಷ ಸರ್ಕಾರಕ್ಕೆ ಬರುವ ಆದಾಯ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿ ೨೦೧೮-೧೯ನೇ ಸಾಲಿನಲ್ಲಿ ಖರ್ಚಾಗಿರುವ ವಿವಿಧ ಮದ್ಯ ಪಾನೀಯಗಳ ಪ್ರಮಾಣ ಎಷ್ಟು ; ಇದರ ಅಂದಾಜು ಮೊತ್ತ ಎಷ್ಟು ?

## ಸಾರ್ವಜನಿಕ ಉದ್ದಿಮೆ ಇಲಾಖೆಗಳು ಅನುಕಂಪ ಆಧಾರಿತ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೊಪಲ್ಲಿ (ಪದವೀಧರರ ಕ್ಷೇತ್ರ) :–**

೨೯೫ (೫೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳು ಯಾವುವು ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಈ ಉದ್ದಿಮೆಗಳ ದೈನಂದಿನ ಆಡಳಿತ ಹಾಗೂ ಇತರೆ ಕೆಲಸಕಾರ್ಯಗಳಿಗೆ ಸಂಬಂಧಿಸಿದ ಆಡಳಿತ ಇಲಾಖೆಗಳಾವುವು ; (ಉದ್ದಿಮೆವಾರು ವಿವರವಾದ ಮಾಹಿತಿ ನೀಡುವುದು)

(ಇ) ಈ ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪ ಆಧಾರಿತ ಹುದ್ದೆಗಳ ನೇಮಕಾತಿಗೆ ನಿರ್ಬಂಧ ಇರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಈ ನಿರ್ಬಂಧ ತೆರವುಗೊಳಿಸಲು ಸಾರ್ವಜನಿಕ ಉದ್ದಿಮೆಗಳು/ಸಾರ್ವಜನಿಕ ಉದ್ದಿಮೆಗಳ ಇಲಾಖೆಯು ಕೈಗೊಂಡ ಕ್ರಮಗಳೇನು ;

(ಉ) ಅನುಕಂಪ ಆಧಾರಿತ ಹುದ್ದೆಗಳ ನೇಮಕಾತಿಗೆ ನಿರ್ಬಂಧ ಹಾಕಿ ನೇರ ನೇಮಕಾತಿಗಳಿಗೆ ನಿರ್ಬಂಧ ಹಾಕದಿರಲು ಕಾರಣಗಳೇನು ?

## ಸಾರ್ವಜನಿಕ ಉದ್ದಿಮೆಗಳ ಇಲಾಖೆಯ ವೃಂದ ಮತ್ತು ನೇಮಕಾತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೊಪಲ್ಲಿ (ಪದವೀಧರರ ಕ್ಷೇತ್ರ) :–**

೨೯೬ (೫೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಲಾಭದಲ್ಲಿ ನಡೆಯುತ್ತಿರುವ ಉದ್ದಿಮೆಗಳು ಎಷ್ಟು ; ಸೇವಾ ಹುದ್ದೆಗಳು ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಸಾರ್ವಜನಿಕ ಉದ್ದಿಮೆಗಳು ತನ್ನದೆ ಆದಂತಹ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊಂದಿವೆಯೇ ;

(ಇ) ಹೊಂದಿದ್ದಲ್ಲಿ, ಎಲ್ಲಾ ಸಾರ್ವಜನಿಕ ಉದ್ದಿಮೆಗಳ ಹಾಲಿ ಜಾರಿಯಲ್ಲಿರುವ ಹಾಗೂ ಎಲ್ಲಾ ತಿದ್ದುಪಡಿಗಳನ್ನು ಒಳಗೊಂಡಿರುವ ವೃಂದ ಮತ್ತು ನೇಮಕಾತಿ ನಿಯಮಗಳು ದೃಢೀಕೃತ ಪ್ರತಿಯೊಂದಿಗೆ ಉದ್ದಿಮೆವಾರು ವಿವರವಾದ ಮಾಹಿತಿ ನೀಡುವುದು ;

(ಈ) ಎಷ್ಟು ವರ್ಷಗಳಿಗೊಮ್ಮೆ ಸಾರ್ವಜನಿಕ ಉದ್ದಿಮೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪುನರ್ ಪರಿಶೀಲಿಸಲಾಗುವುದು ;

(ಉ) ಹಾಗಾದಲ್ಲಿ, ಸದರಿ ಉದ್ದಿಮೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪುನರ್ ಪರಿಶೀಲಿಸಲಾಗಿದೆಯೇ ?

## ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳ ಕುರಿತು

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೨೯೭ (೩೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೧ ರಿಂದ ಇಲ್ಲಿಯವರೆಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ ಎಷ್ಟು ಪತ್ರಾಂಕಿತ ಅಧಿಕಾರಿಗಳ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ;

(ಆ) (HOTA) ಸಮಿತಿ ಶಿಫಾರಸ್ಸಿನಂತೆ ಲೋಕಸೇವಾ ಆಯೋಗ ಪ್ರತಿ ವರ್ಷ ಪರೀಕ್ಷೆ ನಡೆಸದಿರುವುದಕ್ಕೆ ಕಾರಣವೇನು ;

(ಇ) ಇದರಿಂದಾಗಿ ಅರ್ಹ ಪದವೀಧರರಿಗೆ ಸೂಕ್ತ ಅವಕಾಶ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳಿಂದಾಗಿ ಆಡಳಿತ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ನಾಮಕರಣ ಕುರಿತಂತೆ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೮ (೫೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ದಕ್ಷಿಣ ಕನ್ನಡ ಜಿಲ್ಲೆಯ ಕೋಟಿ–ಚೆನ್ನಯ್ಯರ ಹೆಸರನ್ನು ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೆಸರು ಇಡುವುದಕ್ಕೆ ಈಗಾಗಲೇ ನೀಡಿರುವ ಪ್ರಸ್ತಾವನೆ ಕಛೇರಿ ಪತ್ರ ಸಂಖ್ಯೆ : ದಕಜಿಪ/ಕೌನ್ಸಿಲ್/ಸಿ.ಆರ್–೩೩/೨೦೧೮–೧೯ರಂತೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ವಿದ್ಯುತ್ತಿನ ಉತ್ಪಾದನೆಯಲ್ಲಿ ಇಳಿಮುಖವಾಗಿದ್ದು, ಸೌರಶಕ್ತಿಯ ಉತ್ಪಾದನೆ ಬಗ್ಗೆ

**ಶ್ರೀ ಮಹಾಂತೇಶ ಮ. ಕವಟಗಿಮಠ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯ (೨೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಮೆಗಾ ವ್ಯಾಟ್ ವಿದ್ಯುತಿನ ಬೇಡಿಕೆ ಇದೆ ;

(ಆ) ರಾಜ್ಯದಲ್ಲಿ ವಿವಿಧ ಮೂಲಗಳಿಂದ ಎಷ್ಟು ಮೆಗಾ ವ್ಯಾಟ್ ವಿದ್ಯುತ್‌ನ್ನು ಉತ್ಪಾದಿಸಲಾಗುತ್ತಿದೆ ; (ವರ್ಗವಾರು ವಿವರ ನೀಡುವುದು)

(ಇ) ಬೇಡಿಕೆ ಮತ್ತು ಸರಬರಾಜಿನ ಮಧ್ಯೆ ಇರುವ ಕೊರತೆಯನ್ನು ಯಾವ ಮೂಲಗಳಿಂದ ತುಂಬಲಾಗುತ್ತಿದೆ ;

(ಈ) ಸರ್ಕಾರವು ಈ ಕೊರತೆಯನ್ನು ಸೌರಶಕ್ತಿಯಿಂದ ವಿದ್ಯುತ್ ಉತ್ಪಾದನೆಗೆ ಹೆಚ್ಚು ಒತ್ತು ಕೊಡುವ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮಗಳೇನು ;

(ಉ) ಸಾರ್ವಜನಿಕರು ತಮ್ಮ ತಮ್ಮ ಮನೆಗಳ ಮೇಲೆ ವಿದ್ಯುತ್ ಪೆನಲ್‌ಗಳನ್ನು ಅಳವಡಿಸಿ ಅವುಗಳ ಮುಖಾಂತರ ತಮ್ಮ ಮನೆಗಳಿಗೆ ಬೇಕಾದಂತಹ ವಿದ್ಯುತ್‌ನ್ನು ತಾವೇ ಉತ್ಪಾದಿಸುವುದರೊಂದಿಗೆ ಹೆಚ್ಚಿನ ವಿದ್ಯುತ್‌ನ್ನು ಸರ್ಕಾರದ ವಿದ್ಯುತ್ ಜಾಲಕ್ಕೆ ವರ್ಗಾವಣೆ ಮಾಡಲು ಸರ್ಕಾರವು ಹೊಸ ಯೋಜನೆಗಳೇನಾದರೂ ರೂಪಿಸಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ರಾಜ್ಯದಲ್ಲಿ ಹಬ್ಬ ಹರಿದಿನ ಬಂದಾಗ ಸಾರಿಗೆ ಸಂಸ್ಥೆಯವರು ಸಾಮಾನ್ಯ ದರಕ್ಕಿಂತ ಹೆಚ್ಚಿನ ದರವನ್ನು ವಿಧಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೦ (೨೦೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎರಡನೇ ಶನಿವಾರ ಹಾಗೂ ರವಿವಾರ, ಸರ್ಕಾರಿ ರಜಾ ಸಮಯದಲ್ಲಿ ಸರ್ಕಾರಿ ನೌಕರರು ಮತ್ತು ಸಾರ್ವಜನಿಕರು

ತಮ್ಮ ತಮ್ಮ ಊರುಗಳಿಗೆ ಪ್ರಯಾಣ ಮಾಡುತ್ತಿದ್ದು, ಈ ಸಂದರ್ಭದಲ್ಲಿ ಖಾಸಗಿ ಸಾರಿಗೆ ಸಂಸ್ಥೆಯವರು ಸಾಮಾನ್ಯ ದರಕ್ಕಿಂತಲೂ ದುಪ್ಪಟ್ಟು ಚಾರ್ಜ್ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಖಾಸಗಿಯವರಲ್ಲದೇ ಸರ್ಕಾರಿ ಸ್ವಾಮ್ಯದ ಕೆ.ಎಸ್.ಆರ್.ಟಿ.ಸಿ.ಯಲ್ಲಿಯೂ ಕೂಡ ಟಿಕೆಟ್‌ನ ಬೆಲೆ ಏರಿಸುತ್ತಿರುವುದು ಸಾರ್ವಜನಿಕರಲ್ಲಿ ಆತಂಕ ಉಂಟು ಮಾಡಿರುವುದರ ಬಗ್ಗೆ ಸರ್ಕಾರದ ನಿಲುವೇನು ;

(ಇ) ಈ ರೀತಿ ಹಬ್ಬ–ಹರಿದಿನಗಳಲ್ಲಿ ಪ್ರಯಾಣಿಕರಿಗೆ ಆಗುತ್ತಿರುವ ಸುಲಿಗೆ ನಿಲ್ಲಿಸಲು ಸರ್ಕಾರ ಮುಂಬರುವ ದಿನಗಳಲ್ಲಿ ಏನು ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ಹಟ್ಟಿ ಚಿನ್ನದ ಗಣಿ ಕಾರ್ಯ ವೈಖರಿಯ ಸುಧಾರಣೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೧ (೨೦೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಟ್ಟಿ ಚಿನ್ನದ ಗಣಿಯು ಯಾವ ವರ್ಷದಲ್ಲಿ ಪ್ರಾರಂಭವಾಯಿತು ;

(ಆ) ಈ ಚಿನ್ನದ ಗಣಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಒಟ್ಟು ಸಂಖ್ಯೆ ಎಷ್ಟು ; (ಖಾಯಂ ಹಾಗೂ ತಾತ್ಕಾಲಿಕ ಕಾರ್ಮಿಕರ ವಿವರ ನೀಡುವುದು)

(ಇ) ಈ ಚಿನ್ನದ ಗಣಿಯ ನಿರ್ವಹಣೆಗಾಗಿ ವರ್ಷಕ್ಕೆ ವ್ಯಯ ಮಾಡಲಾಗುತ್ತಿರುವ ಹಣ ಎಷ್ಟು ;

(ಈ) ಈ ಚಿನ್ನದ ಗಣಿ ಆರಂಭವಾದಾಗಿನಿಂದ ಉತ್ಪಾದಿಸಲಾದ ಚಿನ್ನದ ಪ್ರಮಾಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಉ) ಈ ಚಿನ್ನದ ಗಣಿಯ ಹಾಲಿ ಉತ್ಪಾದನೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಡಾ॥ ನಂಜುಂಡಪ್ಪ ಸಮಿತಿಯ ವರದಿಯನ್ನು ಸಲ್ಲಿಸಿದ್ದು, ಈ ವರದಿಯ ಅನುಷ್ಠಾನದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨ (೧೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ನಂಜುಂಡಪ್ಪ ರವರ ಅಧ್ಯಕ್ಷತೆಯಲ್ಲಿ ರಚಿಸಲಾದ ಈ ಸಮಿತಿಯು ವರದಿಯನ್ನು ಯಾವಾಗ ಸಲ್ಲಿಸಿತು ಮತ್ತು ಈ ವರದಿಯ ಪ್ರಕಾರ ಯಾವ ಕಾಲಮಿತಿಯಲ್ಲಿ ಸಮತೋಲನೆಯನ್ನು ತರಲು ಉದ್ದೇಶಿಸಲಾಗಿದೆ ;

(ಆ) ಈ ಸಮಿತಿಯ ಪ್ರಕಾರ ರಾಜ್ಯದಲ್ಲಿ ಒಟ್ಟು ಹಿಂದುಳಿದ ಜಿಲ್ಲೆ ಹಾಗೂ ತಾಲ್ಲೂಕುಗಳೆಷ್ಟು ;

(ಇ) ಕಳೆದ ೩ ವರ್ಷಗಳ ಅವಧಿಯಲ್ಲಿ ಈ ವರದಿಯಾನುಸಾರ ಅಭಿವೃದ್ಧಿಗಾಗಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ; (ಇಲಾಖಾವಾರು ಅಂಕಿ ಸಂಖ್ಯೆಯನ್ನು ಒದಗಿಸುವುದು)

(ಈ) ಆಯವ್ಯಯದಲ್ಲಿ ಈ ವರದಿಯ ಅನುಷ್ಠಾನಕ್ಕಾಗಿ ಹಂಚಿಕೆಯಾದ ಹಣವನ್ನು ಸಂಪೂರ್ಣವಾಗಿ ವ್ಯಯಿಸಲಾಗಿದೆಯೇ ; (ವಿವರ ನೀಡುವುದು)

(ಉ) ಡಾ॥ ನಂಜುಂಡಪ್ಪ ವರದಿಯ ಅನುಷ್ಠಾನವು ಯಾವ ಹಂತದಲ್ಲಿದೆ ಹಾಗೂ ಅದಕ್ಕೆ ಹೆಚ್ಚು ಚಾಲನೆಯನ್ನು ಕೊಡುವ ಹಿನ್ನೆಲೆಯಲ್ಲಿ ಸರ್ಕಾರ ಜರುಗಿಸಲಿರುವ ಕ್ರಮವೇನು ?

## ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿ. ಸಂಸ್ಥೆಗಳು ಸತತ ನಷ್ಟದಲ್ಲಿದ್ದು, ವಿದ್ಯುತ್ ಚಾಲಿತ ಬಸ್ಸುಗಳನ್ನು ಉಪಯೋಗಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೩ (೨೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದೇಶಗಳಲ್ಲಿ ಹಾಗೂ ದೇಶದಲ್ಲಿ ಹಲವಾರು ಕಡೆ ವಿದ್ಯುತ್ ಚಾಲಿತ ಬ್ಯಾಟರಿಗಳ ಮುಖಾಂತರ ನಡೆಯುವ ವಾಹನಗಳನ್ನು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ದುಬಾರಿ ಬೆಲೆಯ ಡೀಸೆಲ್ ಬಳಕೆಗಿಂತ ವಿದ್ಯುತ್ ಚಾಲಿತ ಬ್ಯಾಟರಿ ಬಸ್ಸುಗಳನ್ನು ಖರೀದಿಸುವ ಯೋಜನೆ ಸರ್ಕಾರಕ್ಕಿದೆಯೇ ;

(ಇ) ಈ ತರಹದ ವಿದ್ಯುತ್ ಚಾಲಿತ ಬ್ಯಾಟರಿ ಬಸ್ಸುಗಳನ್ನು ನಿರ್ಮಾಣ ಮಾಡುತ್ತಿರುವ ಕಂಪನಿಗಳ ಹೆಸರೇನು ಹಾಗೂ ಪ್ರತಿ ಬಸ್ಸಿಗೆ ತಗಲುವ ಅಂದಾಜು ವೆಚ್ಚವೆಷ್ಟು ?

## ಮುಂಬಡ್ತಿ ಪ್ರಾತಿನಿಧ್ಯ ಪ್ರಮಾಣಗಳ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೪ (೪೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಮುಂಬಡ್ತಿ ಮೀಸಲಾತಿ ಆದೇಶದ ರೀತ್ಯಾ ಸಾಮಾನ್ಯ ವರ್ಗ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನೌಕರರಿಗೆ ನೀಡಿರುವ ಪ್ರಾತಿನಿಧ್ಯದ ಪ್ರಮಾಣವೆಷ್ಟು ;

(ಆ) ಪ್ರಾತಿನಿಧ್ಯದಲ್ಲಿ ಸಾಮಾನ್ಯ ವರ್ಗದ ಪ್ರಾತಿನಿಧ್ಯ ಪ್ರಮಾಣ ಶೇ ೮೨ ರಷ್ಟನ್ನು ಮೀರಿದ್ದಲ್ಲಿ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನೌಕರರ ಪ್ರಾತಿನಿಧ್ಯ ಪ್ರಮಾಣ ಶೇಕಡ ೧೮ನ್ನು ಮೀರಿದ್ದಲ್ಲಿ ದಿನಾಂಕ ೩೦-೦೮-೧೯೭೯ ಅಥವಾ ೧೩.೦೪.೧೯೯೯ರ ಆದೇಶಗಳ ರೀತ್ಯಾ ರೋಸ್ಟರ್ ಬಿಂದುಗಳನ್ನು/ ಪ್ರಾತಿನಿಧ್ಯ ಪ್ರಮಾಣವನ್ನು ಹೇಗೆ ಅನುಸರಿಸಬೇಕು ;

(ಇ) ಯಾವುದೇ ವರ್ಗದ ನೌಕರರ ಪ್ರಾತಿನಿಧ್ಯ ಪ್ರಮಾಣ ನಿಗದಿಪಡಿಸಿದ್ದಕ್ಕಿಂತ ಹೆಚ್ಚಾಗಿದ್ದಲ್ಲಿ ರೋಸ್ಟರ್ ಅನುಸರಿಸಬಹುದೆ ಅಥವಾ ಯಾವ ಕ್ರಮಗಳನ್ನು ಅನುಸರಿಸಬೇಕು ? (ಪೂರಕ ಆದೇಶಗಳನ್ನು ಒದಗಿಸುವುದು)

## ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಪುನಃಶ್ಚೇತನದ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೦೫ (೩೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೯೭೫ರಲ್ಲಿ ದಿ॥ ಮಾಜಿ ಪ್ರಧಾನಿ ಶ್ರೀಮತಿ ಇಂದಿರಾಗಾಂಧಿಯವರ ೨೦ ಅಂಶಗಳ ಕಾರ್ಯಕ್ರಮದ ಅಡಿಯಲ್ಲಿ ಪ್ರಾರಂಭವಾದಂತಹ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮವನ್ನು ಪುನಃಶ್ಚೇತನಗೊಳಿಸುವ ವಿಚಾರ ಯಾವ ಹಂತದಲ್ಲಿದೆ ;

(ಆ) ಈ ವಿಚಾರದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

# ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅವ್ಯವಹಾರಗಳ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೦೬ (೪೦೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಭ್ರಷ್ಟಾಚಾರ ಮತ್ತು ಅವ್ಯವಹಾರಗಳಿಗೆ ಸಂಬಂಧಪಟ್ಟಂತೆ ಒಟ್ಟು ಎಷ್ಟು ಪ್ರಕರಣಗಳಿವೆ ; ಈ ಪೈಕಿ ಇತ್ಯರ್ಥಗೊಂಡಿರುವ ಮತ್ತು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಭಾಗಿಯಾಗಿರುವ ಇಲಾಖೆಯ ಎ,ಬಿ, ಮತ್ತು ಸಿ ದರ್ಜೆಯ ಅಧಿಕಾರಿ/ನೌಕರರ ಸಂಪೂರ್ಣ ಮಾಹಿತಿಯನ್ನು ಅವರ ಹುದ್ದೆ ಸಹಿತ ನೀಡುವುದು ; ಸದರಿ ಅಧಿಕಾರಿ/ನೌಕರರು ಹಾಲಿ ಯಾವ ಯಾವ ಇಲಾಖೆಗಳಲ್ಲಿ ಯಾವ್ಯಾವ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಪ್ರಕರಣವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಪ್ರಕರಣಗಳಿಗೆ ಸಂಬಂಧಪಟ್ಟಂತೆ ನ್ಯಾಯಾಲಯದಲ್ಲಿ ಆರೋಪ ಪಟ್ಟಿ ಸಲ್ಲಿಕೆಯಾಗಿ ವಿಚಾರಣೆಯ ಹಂತದಲ್ಲಿರುವ ಪ್ರಕರಣಗಳು ಎಷ್ಟು ; ಅವು ಯಾವುವು ; ನ್ಯಾಯಾಲಯದಲ್ಲಿರುವ ಈ ಪ್ರಕರಣಗಳು ೩೦ ಜೂನ್ ೨೦೧೯ರ ಅಂತ್ಯಕ್ಕೆ ಯಾವ ಹಂತದಲ್ಲಿವೆ ; (ಪ್ರಕರಣವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ನ್ಯಾಯಾಲಯದಲ್ಲಿ ಆರೋಪ ಪಟ್ಟಿ ಸಲ್ಲಿಕೆಯಾಗಿರುವ ಪ್ರಕರಣಗಳೂ ಸೇರಿದಂತೆ ಇಲಾಖೆಯಲ್ಲಿನ ಈ ಭ್ರಷ್ಟಾಚಾರ ಹಾಗೂ

ಅವ್ಯವಹಾರಗಳಿಗೆ ಸಂಬಂಧಪಟ್ಟಂತೆ ಎಷ್ಟು ಜನ ಅಧಿಕಾರಿಗಳ ವಿರುದ್ಧ ಸಿ.ಸಿ.ಎ ನಿಯಮಾವಳಿ ಅಡಿಯಲ್ಲಿ ಯಾವ ಶಿಸ್ತು ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ರಿಯಾಯಿತಿ ದರದ ಪಾಸ್ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೦೭ (೪೦೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಹಾಗೂ ಇತರೆ ನಗರಗಳಲ್ಲಿ ಸಂಚರಿಸುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಹಾಗೂ ನಗರ ಸಾರಿಗೆ ಬಸ್‌ಗಳಲ್ಲಿ ಸಂಚರಿಸಲು ಕೋರಿಕೆ ಸಲ್ಲಿಸಿದ ವಿದ್ಯಾರ್ಥಿಗಳಿಗೆ ರಿಯಾಯಿತಿ ದರದ ಪಾಸುಗಳನ್ನು ನೀಡಲಾಗುತ್ತಿದೆಯೇ ;

(ಆ) ಸದರಿ ರಿಯಾಯಿತಿ ಪಾಸುಗಳನ್ನು ನೀಡುವಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು ; (ಪ್ರತ್ಯೇಕವಾಗಿ ಪೂರ್ಣ ವಿವರ ನೀಡುವುದು)

(ಇ) ನಿಗದಿಪಡಿಸಲಾದ ದರಗಳ ಬಗ್ಗೆ ಮಾಹಿತಿ ನೀಡುವುದು ;

(ಈ) ವಾರ್ಷಿಕ ಶೈಕ್ಷಣಿಕ ಎಷ್ಟು ಅವಧಿಗೆ ಪಾಸುಗಳನ್ನು ವಿತರಿಸಲಾಗುತ್ತಿದೆ ;

(ಉ) ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸಲು ಸರ್ಕಾರ ಚಿಂತಿಸಿರುವುದೇ ;

(ಊ) ಯಾವ ಕಾಲಮಿತಿಯಲ್ಲಿ ಉಚಿತ ಬಸ್ ಪಾಸ್ ವಿತರಿಸಲಾಗುವುದು ?

## ವಿದ್ಯುತ್ ಲೇನ್‌ಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೮ (೩೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦ ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ರಸ್ತೆ ಅಗಲೀಕರಣಕ್ಕಾಗಿ ವಿದ್ಯುತ್ ಲೇನ್‌ಗಳನ್ನು ಅಳವಡಿಸಲು ಹಾಗೂ ಅಭಿವೃದ್ಧಿ ಕಾಮಗಾರಿಗಳಿಗಾಗಿ ಕಡಿಯಲಾಗಿರುವ ಮರಗಳ ಸಂಖ್ಯೆಯೆಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮರಗಳನ್ನು ಕಡಿಯಲು ಸರ್ಕಾರ ಖರ್ಚು ಮಾಡಿದ ಹಣವೆಷ್ಟು ; ಮರಗಳ ಮಾರಾಟದಿಂದ ಬಂದ ಆದಾಯವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಡಿಯಲಾಗಿರುವ ಮರಗಳ ಜಾಗದಲ್ಲಿ ಸಸಿಗಳನ್ನು ನೆಡಲಾಗಿದೆಯೇ ; ಹಾಗಿದ್ದಲ್ಲಿ, ಇಲ್ಲಿಯವರೆವಿಗೂ ನೆಡಲಾಗಿರುವ ಸಸಿಗಳ ಸಂಖ್ಯೆಯೆಷ್ಟು ; ಅದಕ್ಕಾಗಿ ಖರ್ಚು ಮಾಡಿದ ಹಣವೆಷ್ಟು ? (ವರ್ಷವಾರು, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತ (ಎಂ.ಎಂ.ಎಲ್) ದಿಂದ ಗಣಿಗಾರಿಕೆಗೆ ಗುತ್ತಿಗೆ ನೀಡಿರುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೦೯ (೩೪೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತ (ಎಂ.ಎಂ.ಎಲ್) ದಿಂದ ಇಲ್ಲಿಯವರೆಗೂ ರಾಜ್ಯದಲ್ಲಿ ಎಷ್ಟು

ಜನರಿಗೆ ಮತ್ತು ಎಷ್ಟು ಸಂಸ್ಥೆಗಳಿಗೆ ಗಣಿಗಾರಿಕೆಗೆ ಗುತ್ತಿಗೆ (ಲೀಸ್) ನೀಡಲಾಗಿದೆ ; ಯಾವ ಯಾವ ಖನಿಜಗಳನ್ನು ಹೊರತೆಗೆಯಲು ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತ (ಎಂ.ಎಂ.ಎಲ್) ದಿಂದ ಸುಣ್ಣದಕಲ್ಲು (ಲೈಮ್ ಸ್ಟೋನ್) ಮತ್ತು ಡೋಲೋಮೈಟ್ ಖನಿಜಗಳ ಗಣಿಗಾರಿಕೆಗಾಗಿ ರಾಜ್ಯದಲ್ಲಿ ಇಲ್ಲಿಯವರೆಗೂ ಒಟ್ಟು ಎಷ್ಟು ಜನರಿಗೆ/ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ ;

(ಇ) ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತ (ಎಂ.ಎಂ.ಎಲ್) ದಿಂದ ಲೀಸ್ ಪಡೆದ ಪ್ರತಿಯೊಬ್ಬರಿಗೆ ಅಥವಾ ಪ್ರತಿ ಸಂಸ್ಥೆಗೆ ನೀಡಲಾಗಿರುವ ಲೀಸ್‌ನ ಅವಧಿ ಎಷ್ಟು ; ಯಾವ ದಿನಾಂಕದಿಂದ ಮತ್ತು ಎಷ್ಟು ಎಕರೆ ಪ್ರದೇಶದಲ್ಲಿ ಎಷ್ಟು ಘನವಿಸ್ತೀರ್ಣ ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ ;

(ಈ) ಲೀಸ್ ಪಡೆದ ಪ್ರತಿಯೊಬ್ಬರೂ ಇಲ್ಲಿಯವರೆಗೂ ಎಷ್ಟು ಪ್ರಮಾಣದ ಖನಿಜವನ್ನು ಹೊರತೆಗೆದಿರುತ್ತಾರೆ ;

(ಉ) ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತಗೆ ಗಣಿಗಾರಿಕೆಯಿಂದ ಆದಾಯ ಎಷ್ಟು ಬರುತ್ತಿರುವುದು ; ಕಳೆದ ೦೫ ವರ್ಷಗಳಿಂದ ಪ್ರತಿ ವರ್ಷವಾರು ಪ್ರತಿ ಖನಿಜವಾರು ಮಾಹಿತಿ ನೀಡುವುದು ;

(ಊ) ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದಿಂದ ಇಲ್ಲಿಯವರೆಗೂ ಎಷ್ಟು ಜನರಿಗೆ/ಸಂಸ್ಥೆಗಳಿಗೆ ಗುತ್ತಿಗೆಯನ್ನು ಬಿಟ್ಟುಕೊಡಲಾಗಿದೆ ; ಮತ್ತು ಗುತ್ತಿಗೆಯನ್ನು ವರ್ಗಾಯಿಸಲಾಗಿದೆ ;

(ಋ) ರಾಜ್ಯದಲ್ಲಿ ಸ್ವಂತ ಗಣಿಗಾರಿಕೆಯನ್ನು ಹೊಂದಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆಗಳು ಎಷ್ಟು ;

(ಎ) ಸದರಿ ಕಾರ್ಖಾನೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ?

## ದೆಹಲಿಯ ಕರ್ನಾಟಕ ಭವನ ನಿರ್ವಹಣೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೧೦ (೫೪೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೆಹಲಿಯಲ್ಲಿರುವ ಕರ್ನಾಟಕ ಭವನಗಳ ನಿರ್ವಹಣೆ ಮಾಡುವ ಇಲಾಖೆ ಯಾವುದು;

(ಆ) ಈ ಕರ್ನಾಟಕ ಭವನದಲ್ಲಿ ರಾಜ್ಯದ ಶಾಸಕರುಗಳಿಗೆ, ಮಂತ್ರಿಗಳಿಗೆ, ಅಧಿಕಾರಿಗಳಿಗೆ ಸಿಗುವ ಸೌಲಭ್ಯಗಳೇನು; (ಈ ಸಂಬಂಧ ರಾಜ್ಯ ಸರ್ಕಾರ ರೂಪಿಸಿರುವ ನಿಯುಮಗಳೇನು; ಪ್ರತಿಗಳನ್ನು ನೀಡುವುದು)

(ಇ) ಈ ನಿಯಮಗಳನ್ನು ರೂಪಿಸಲು ಸರ್ಕಾರವು ಅನುಸರಿಸುವ ಮಾನದಂಡಗಳೇನು? (ಮಾಹಿತಿ ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಮಂಡಳಿ ಅನುದಾನ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೧೧ (೫೫೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಯಲುಸೀಮೆ ಅಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಬರುವ ಎಲ್ಲಾ ಶಾಸಕರುಗಳಿಂದ ೧.೦೦ ಕೋಟಿ ರೂ. ಮೊತ್ತದ ಯೋಜನೆಗಳನ್ನು ತಯಾರಿಸಿ ಮಂಡಳಿಗೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಸುಮಾರು ೬ ತಿಂಗಳು ಕಳೆದರೂ ಇರುವರೆವಿಗೂ ಈ ಸಂಬಂಧ ಹಣ ಬಿಡುಗಡೆ ಮಾಡದೇ ಇರುವುದಕ್ಕೆ ಕಾರಣವೇನು? (ಮಾಹಿತಿ ನೀಡುವುದು)

## ದೆಹಲಿ ನಿವಾಸಿ ಆಯುಕ್ತ ಹುದ್ದೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೧೨ (೫೫೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದ ಪ್ರತಿನಿಧಿಯಾಗಿ ದೆಹಲಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವಾಸಿ ಆಯುಕ್ತರ ಹುದ್ದೆ ಸೃಷ್ಠಿ ಆಗಿದ್ದು ಯಾವಾಗ; ಇರುವರೆಗೂ ಯಾವ ಯಾವ ಅಧಿಕಾರಿಗಳು ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ; ಅವರ ಅಧಿಕಾರದ ಅವಧಿ ತಿಳಿಸುವುದು;

(ಆ) ಆ ಅಧಿಕಾರಿಗಳ ಅವಧಿಯಲಿ ಕರ್ನಾಟಕಕ್ಕೆ ಸಂಬಂಧಿಸಿದಂತೆ ಯಾವ ಯಾವ ಯೋಜನೆಗಳನ್ನು ಕೇಂದ್ರ ಸರ್ಕಾರದ ಜೊತೆ ಸಮಾಲೋಚಿಸಿ ಪರಿಹಾರಗಳನ್ನು ಕಂಡುಕೊಳ್ಳಲಾಗಿದೆ; (ವಿವರಗಳನ್ನು ನೀಡುವುದು)

(ಇ) ಇದುವರೆವಿಗೂ ನಿವಾಸಿ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿದ ಅಧಿಕಾರಿಗಳ ಕಾರ್ಯವೈಖರಿ ಬಗ್ಗೆ ಸರ್ಕಾರಕ್ಕೆ ತೃಪ್ತಿ ಇದೆಯೇ? (ಮಾಹಿತಿ ನೀಡುವುದು)

## ದೆಹಲಿಯ ಕರ್ನಾಟಕ ಭವನದ ಅವ್ಯವಸ್ಥೆ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೩೧೩ (೫೫೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದೆಹಲಿ ಕರ್ನಾಟಕ ಭವನ ನಿರ್ವಹಣೆಗೆ ನಿಯೋಜನೆ - ಗೊಂಡಿರುವ ಏಜೆನ್ಸಿಗಳು ಯಾವುದು ;

(ಆ) ಈ ಏಜೆನ್ಸಿಗಳಿಂದ ಕರ್ನಾಟಕ ಭವನದ ನಿರ್ವಹಣೆ ತೃಪ್ತಿಕರವಾಗಿರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ಅಲ್ಲಿ ಸಿಗುವ ಸೌಲಭ್ಯಗಳು ಗುಣಾತ್ಮಕವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಮಾಹಿತಿ ನೀಡುವುದು)

## ಅಕ್ರಮ ಮರಳು ದಂಧೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೧೪ (೪೮೯) ಮಾನ್ಯ ಗಣಿ ಮತ್ತು ಭೂವಿಜ್ಞಾನ  ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಾದ್ಯಂತ ಅಕ್ರಮ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಅತಿ ಹೆಚ್ಚು ಅಕ್ರಮ ಮರಳು ದಂಧೆ ನಡೆಯುತ್ತಿದೆ; (ವಿವರ ಒದಗಿಸುವುದು)

(ಇ) ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಪ್ರತಿ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು ಅಕ್ರಮ ಮರಳು ನಡೆಸುತ್ತಿದ್ದವರನ್ನು ಬಂಧಿಸಿ, ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ್ ಅಧಿಕಾರಿಗಳಿಗೆ

ಆದೇಶಿಸಿದ್ದು, ಆ ಆದೇಶದ ಅನ್ವಯ ದಾಖಲಾಗಿರುವ ಪ್ರಕರಣಗಳ ವಿವರ ಒದಗಿಸುವುದು;

(ಈ) ಕಳೆದ ೫ ವರ್ಷಗಳಿಂದ ಅಕ್ರಮ ಮರಳು ದಂಧೆ ನಡೆಸುತ್ತಿದ್ದವರ ಮೇಲೆ ಕಾನೂನಿನ ಕ್ರಮ ಜರಗಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು? (ಸಂಪೂರ್ಣ ವಿವರ ಒದಗಿಸುವುದು)

## ವಿಜಯಪುರ ಜಿಲ್ಲೆಯ ಮೂಲಭೂತ ಸೌಕರ್ಯ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೧೫ (೪೦೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೂಲಸೌಕರ್ಯ ಅಭಿವೃದ್ಧಿ ಇಲಾಖೆಯ ವತಿಯಿಂದ ಕಳೆದ ೨ ವರ್ಷಗಳಿಂದ ವಿಜಯಪುರ ಜಿಲ್ಲೆಯ ಮೂಲಭೂತಸೌಕರ್ಯ ಅಭಿವೃದ್ಧಿಗಾಗಿ ಇಲ್ಲಿಯವರೆಗೆ ಮಂಜೂರಾಗಿರುವ ಅನುದಾನದ ಮೊತ್ತ ಎಷ್ಟು; (ಶೀರ್ಷಿಕೆವಾರು ವಿವರ ಒದಗಿಸುವುದು)

(ಆ) ಮಂಜೂರಾಗಿರುವ ಅನುದಾನದ ಮೊತ್ತದಲ್ಲಿ ಇಲ್ಲಿಯವರೆಗೆ ಯಾವ ಯಾವ ಕಾಮಗಾರಿಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಲಾಗಿದೆ; (ಮೊತ್ತದ ವಿವರವನ್ನು ಒದಗಿಸುವುದು)

(ಇ) ಉಳಿದಿರುವ ಅನುದಾನದ ಮೊತ್ತದ ವಿವರ ಒದಗಿಸುವುದು ಮತ್ತು ಸದರಿ ಮೊತ್ತವನ್ನು ಯಾವಾಗ ಬಳಕೆ ಮಾಡಿಕೊಂಡು ಉಳಿದಿರುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು? (ವಿವರ ಒದಗಿಸುವುದು)

## ನೂತನ ಎಂ.ಎಸ್.ಐ.ಎಲ್. ಘಟಕಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೩೧೬ (೪೦೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಬಕಾರಿ ಇಲಾಖಾ ವತಿಯಿಂದ ಕಳೆದ ೨ ವರ್ಷಗಳಿಂದ ವಿಜಯಪುರ ಜಿಲ್ಲೆಗೆ ಮಂಜೂರು ಮಾಡಿರುವ ನೂತನ ಎಂ.ಎಸ್.ಐ.ಎಲ್. ಲಿಕ್ಕರ್ ಘಟಕಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಇದರಲ್ಲಿ ಈಗಾಗಲೇ ಕಾರ್ಯಾರಂಭಿಸಿರುವ ಎಂ.ಎಸ್.ಐ.ಎಲ್. ಲಿಕ್ಕರ್ ಘಟಕಗಳ ವಿವರ ಒದಗಿಸುವುದು;

(ಇ) ಮಂಜೂರಾಗಿದ್ದರೂ ಕಾರ್ಯಾರಂಭ ಮಾಡದೆ ಇರಲು ಕಾರಣಗಳೇನು? (ಘಟಕವಾರು ವಿವರ ಒದಗಿಸುವುದು)

## ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ನಿವೇಶನಗಳನ್ನು ನಿರ್ಮಿಸಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೭ (೫೩೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ನಿವೇಶನಗಳನ್ನು ಇದುವರೆವಿಗೆ ಎಲ್ಲೆಲ್ಲಿ ನಿರ್ಮಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಎಲ್ಲಾ ಕೈಗಾರಿಕಾ ಪ್ರದೇಶದಲ್ಲಿ ಒಟ್ಟು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳಿಗೆ ಯಾವ ಅಳತೆಯ ಹಾಗೂ ಎಷ್ಟೆಷ್ಟು

ಮೊತ್ತಕ್ಕೆ ನಿವೇಶನ ನೀಡಲಾಗಿದೆ; (ಕೈಗಾರಿಕಾ ಪ್ರದೇಶವಾರು ವಿವರ ನೀಡುವುದು)

(ಇ) ಕೆ.ಐ.ಎ.ಡಿ.ಬಿ. ಯಲ್ಲಿ ಕೆಲಸ ಮಾಡುತ್ತಿರುವ ಅಧಿಕಾರಿ/ ನೌಕರರುಗಳ ಸಂಖ್ಯೆ ಎಷ್ಟು; ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಲ್ಲಿ ನೇಮಕಾತಿ ಮತ್ತು ಬಡ್ತಿಯಲ್ಲಿ ನಿಗಧಿತ ಶೇಕಡವಾರು ಹುದ್ದೆಗಳನ್ನು ನೀಡಲಾಗಿದೆಯೇ;

(ಈ) ನೀಡಿದ್ದಲ್ಲಿ, ವೃಂದವಾರು ಹೆಸರು ಮತ್ತು ಯಾವ ದಿನಾಂಕದಿಂದ ನೀಡಲಾಗಿದೆ? (ಯಾವ ಯಾವ ಹಂತದಲ್ಲಿ ಬಡ್ತಿ ನೀಡಲಾಗಿದೆ ಎಂಬುವುದರ ವಿವರ ಒದಗಿಸುವುದು)

## ರಾಜ್ಯದಲ್ಲಿ ಖಾಸಗಿ ಸಂಸ್ಥೆಗಳ ಬಸ್‌ಗಳು ಮತ್ತು ಹೆಚ್ಚುವರಿ ದರದ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಎನ್ ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು:–**

೩೧೮ (೪೧೧+೧೯೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಖಾಸಗಿ ಸಂಸ್ಥೆಗಳ ಬಸ್‌ಗಳು ಸಂಚರಿಸುತ್ತಿವೆ; (ಆ ಸಂಸ್ಥೆಗಳ ಹೆಸರು ಹಾಗು ಮಾಲೀಕರ ಹೆಸರು ಸಹಿತ ವಿವರ ನೀಡುವುದು) ಅವರಿಗೆ ಮಂಜೂರಾದ ಮಾರ್ಗಗಳು ಯಾವುವು; (ವಿವರ ನೀಡುವುದು)

(ಆ) ಖಾಸಗಿ ಸಾರಿಗೆ ಸಂಸ್ಥೆಯವರು ಹಬ್ಬದ ದಿನಗಳಂದು ಮತ್ತು ಸರ್ಕಾರಿ ರಜೆ ದಿನಗಳಂದು ಸಂಚರಿಸುವ ಬಸ್ಸುಗಳ ಟಿಕೇಟ್ ದರಗಳನ್ನು ವಿಪರೀತವಾಗಿ ಹೆಚ್ಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಯಾವ ಕ್ರಮಕೈಗೊಂಡಿದೆ;

(ಇ) ಅನುಮತಿ ಕೊಡುವಾಗ ವಿಧಿಸಿದಂತಹ ನಿಯಮಗಳೇನು; ನಿಯಮಗಳನ್ನು ಸದರಿ ಸಂಸ್ಥೆಗಳು ಪಾಲಿಸುತ್ತಿವೆಯೇ; ಪಾಲಿಸದಿದ್ದ ಎಷ್ಟು ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ;

(ಈ) ಹಬ್ಬ-ಹರಿದಿನಗಳಲ್ಲಿ ಮತ್ತು ಸರ್ಕಾರಿ ರಜೆ ದಿನಗಳಲ್ಲಿ ೫ ರಿಂದ ೧೦ ಪಟ್ಟು ದರವನ್ನು ಹೆಚ್ಚು ಮಾಡಿ ಜನರಿಗೆ ಆರ್ಥಿಕ ತೊಂದರೆ ಹಾಗೂ ಹಿಂಸೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ; ಈ ರೀತಿ ಟಿಕೇಟ್ ದರ ಏರಿಸಿರುವ ಎಷ್ಟು ಬಸ್ಸುಗಳ ಪರವಾಗಿಯನ್ನು ರದ್ದುಗೊಳಿಸಲಾಗಿದೆ;

(ಉ) ಇದೇ ಪದ್ಧತಿಯನ್ನು ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಅನುಸರಿಸುತ್ತಿರುವುದು ನಿಜವೇ; ನಿಜವಿದ್ದಲ್ಲಿ ಕಾರಣಗಳೇನು;

(ಊ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಎಷ್ಟು ಸರ್ಕಾರಿ ಬಸ್ಸುಗಳನ್ನು ಲೋಕಲ್ ಸಾರಿಗೆ ಬಸ್ಸುಗಳನ್ನಾಗಿ ಬಳಸಲಾಗುತ್ತಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸೋಲಾರ್‌ನಿಂದ ರೈತರು ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೧೯ (೪೧೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸೋಲಾರ್‌ನಿಂದ ರೈತರ ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆಯು ಸರಿಯಾಗಿ ಪ್ರಚಾರವಾಗದೆ ನಿರೀಕ್ಷಿತ ಮಟ್ಟದಲ್ಲಿ ರೈತರಿಗೆ ಉಪಯೋಗವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸೋಲಾರ್‌ನಿಂದ ರೈತರ ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆಯು ಯಾವಾಗಿನಿಂದ ಜಾರಿಗೆ ಬಂದಿದೆ; ಈ ಯೋಜನೆಯಲ್ಲಿ ರೈತರಿಗೆ ಸರ್ಕಾರವು ಯಾವ ಸೌಲಭ್ಯಗಳನ್ನು ಒದಗಿಸುತ್ತದೆ; (ವಿವರ ನೀಡುವುದು)

(ಇ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಹಾಗೂ ಚನ್ನಗಿರಿ ತಾಲ್ಲೂಕುಗಳಲ್ಲಿ ಎಷ್ಟು ಜನ ರೈತರಿಗೆ ಈ ಯೋಜನೆಯ ಸೌಲಭ್ಯಗಳನ್ನು ಒದಗಿಸಲಾಗಿದೆ; ಈವರೆಗೆ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದಿಸಲಾಗಿದೆ; ಸರ್ಕಾರವು ಯಾವ ದರದಲ್ಲಿ ವಿದ್ಯುತ್ ಖರೀದಿಸುತ್ತಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಯೋಜನೆಗೆ ಕೇಂದ್ರ ಸರ್ಕಾರವು ಸಹಾಯಧನ ನೀಡಲಿದೆಯೇ; ಎಷ್ಟು ಪ್ರಮಾಣದ ಸಹಾಯಧನ ನೀಡುತ್ತದೆ?

## ಕೆ.ಐ.ಎ.ಡಿ.ಬಿ. ವತಿಯಿಂದ ಭೂಸ್ವಾಧೀನಪಡಿಸಿಕೊಂಡ ಜಮೀನಿನ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨೦ (೫೩೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಐ.ಎ.ಡಿ.ಬಿ. ವತಿಯಿಂದ ಕಳೆದ ೩ ವರ್ಷಗಳಿಂದ ಇದುವರೆವಿಗೂ ಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ವಿಸ್ತೀರ್ಣ ಎಷ್ಟು; ಈ ಜಮೀನನ್ನು ಯಾವ ಅಭಿವೃದ್ಧಿ ಕಾರ್ಯಗಳಿಗೆ ಉಪಯೋಗಿಸಲಾಗಿದೆ;

(ಆ) ಕೆ.ಐ.ಎ.ಡಿ.ಬಿ.ಗೆ ಹಸ್ತಾಂತರಿಸಿರುವ ಜಮೀನುಗಳನ್ನು ಕೈಗಾರಿಕೆಗಳಿಗೆ ವಿತರಣೆ ಮಾಡುವಾಗ ರೋಸ್ಟರ್ ನಿಯಮ ಪಾಲಿಸಲಾಗುತ್ತಿದೆಯೇ? (ವಿವರ ನೀಡುವುದು)

## ಕೆ.ಪಿ.ಎಸ್.ಸಿ. ೨೦೧೫ ನೇ ಸಾಲಿನ ಗೆಜೆಟೆಡ್ ಪ್ರೋಬೆಷನರಿ ಹುದ್ದೆ ಬಗ್ಗೆ

**ಶ್ರೀ ಹೆಚ್. ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೧ (೧೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ನೇ ಸಾಲಿನಲ್ಲಿ ಕೆ.ಪಿ.ಎಸ್.ಸಿ., ಯು ಗೆಜೆಟೆಡ್ ಪ್ರೊಬೆಷನರಿ ಹುದ್ದೆ ಸೇವೆಯ ಮುಖ್ಯ ಪರೀಕ್ಷೆಯನ್ನು ಡಿಸೆಂಬರ್ ೨೦೧೭ರಲ್ಲಿ ನಡೆಸಿರುವುದು ನಿಜವೇ;

(ಆ) ಈ ಹುದ್ದೆಗಳಿಗೆ ವ್ಯಕ್ತಿತ್ವ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಜನವರಿ ೨೦೧೯ರಲ್ಲಿ ಬಿಡುಗಡೆ ಮಾಡಿರುವುದು ನಿಜವೇ;

(ಇ) ಆರು ತಿಂಗಳಾದರೂ ವ್ಯಕ್ತಿತ್ವ (ಸಂದರ್ಶನ) ಪರೀಕ್ಷೆಯನ್ನು ಕೆ.ಪಿ.ಎಸ್.ಸಿ.ಯು ಏರ್ಪಡಿಸದಿರಲು ಕಾರಣವೇನು; (ಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಹುದ್ದೆಗಳಿಗೆ ಯಾವ ಕಾಲಮಿತಿಯೊಳಗೆ ಸಂದರ್ಶನ ನಡೆಸಲಾಗುವುದು; ವಿಳಂಬ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

## ಕೆಂಪೇಗೌಡ ಬಸ್ ನಿಲ್ದಾಣದ ಆವರಣದ ಸರ್ಕಾರಿ ಸ್ವಾಮ್ಯದ ಮಳಿಗೆ ಬಗ್ಗೆ

**ಶ್ರೀ ಹೆಚ್. ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೨ (೧೮೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಕೆಂಪೇಗೌಡ ಬಸ್ ನಿಲ್ದಾಣದ ಆವರಣದಲ್ಲಿ ಸರ್ಕಾರಿ ಸ್ವಾಮ್ಯದ ಎಷ್ಟು ಮಳಿಗೆಗಳನ್ನು ಬಾಡಿಗೆ ಆಧಾರದ ಮೇಲೆ ನೀಡಲಾಗಿದೆ;

(ಆ) ಇಲ್ಲಿ ಕೆ.ಎಂ.ಎಫ್ ನಂದಿನಿ, ಹಾಪ್‌ಕಾಮ್ಸ್ ಮತ್ತು ಬ್ಯಾಂಕಿನ ಎ.ಟಿ.ಎಂ. ಮಳಿಗೆಗಳಿಗೆ ಈ ಹಿಂದೆ ನಿಗಧಿಪಡಿಸಿರುವ ಪರವಾನಿಗೆ ಶುಲ್ಕವೆಷ್ಟು; ಈಗ ನಿಗಧಿಪಡಿಸಿರುವ ಪರವಾನಿಗೆ ಶುಲ್ಕವೆಷ್ಟು ;

(ಇ) ಪ್ರಸ್ತುತ ಮಳಿಗೆಗಳಿಗೆ ಪರಿಷ್ಕರಿಸಿ ನಿಗಧಿಪಡಿಸಿರುವ ದರವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪ್ರಸ್ತುತ ಪರಿಷ್ಕರಿಸಿರುವ ದರವು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಉತ್ತೇಜನಕ್ಕೆ ಮತ್ತು ರೈತರ ಹಿತದೃಷ್ಟಿಯಿಂದ ಮಾರಕವಾಗಿರುವುದಿಲ್ಲವೇ? (ಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳು ಪ್ರಾರಂಭಿಸುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೨೩ (೫೪೨) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಅರ್ಜಿಗಳನ್ನು ಸ್ವೀಕರಿಸಿ ನಿಗಮಗಳಲ್ಲಿ ಬಾಕಿ ಉಳಿಸಿಕೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಭೂಮಿಯನ್ನು ಪಡೆದು ಎಷ್ಟು ವರ್ಷಗಳಿಂದ ನಿರುಪಯುಕ್ತವಾಗಿ ಇಟ್ಟುಕೊಂಡಿದ್ದಾರೆ; ಅಂತಹ ಫಲಾನುಭವಿಗಳ ಸಂಖ್ಯೆ ಎಷ್ಟು; (ಹೆಸರು ವಿಳಾಸದೊಂದಿಗೆ ವಿವರ ನೀಡುವುದು)

(ಇ) ಜಾಗತಿಕ ಮಟ್ಟದ ಟೆಂಡರ್ ಕರೆಯುವ ಪದ್ಧತಿಯಿಂದಾಗಿ ಸ್ಥಳೀಯ ಸಣ್ಣ ಕೈಗಾರಿಕೆಗಳು ನೇಪಥ್ಯಕ್ಕೆ ಸಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸಣ್ಣ ಕೈಗಾರಿಕೆಗಳಿಗೆ ಸಬ್ಸಿಡಿ ದೊರೆಯುವಲ್ಲೂ ನಿಧಾನವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಉ) ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ಹಮ್ಮಿಕೊಂಡಿರುವ ನೂತನ ಯೋಜನೆಗಳಾವುವು? (ಮಾಹಿತಿ ನೀಡುವುದು)

## ಸಾರಿಗೆ ಬಸ್ ಘಟಕಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೪ (೫೪೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಒಟ್ಟು ಎಷ್ಟು ಸಾರಿಗೆ ಬಸ್ ಘಟಕಗಳು (ಡಿಪೋಗಳು) ಇವೇ; (ತಾಲ್ಲೂಕುವಾರು, ಡಿಪೋವಾರು ಘಟಕದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಎಲ್ಲಾ ಬಸ್ ಘಟಕ/ಡಿಪೋಗಳಲ್ಲಿನ ಬಸ್‌ಗಳ (ವಾಹನ) ಸ್ವಚ್ಛತೆಗಾಗಿ ಸರ್ಕಾರ ಮಾಡಿದ ಖರ್ಚು ಎಷ್ಟು; ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಬಂದ ಅನುದಾನ ಎಷ್ಟು? (ತಾಲ್ಲೂಕುವಾರು/ಡಿಪೋಗಳವಾರು, ವರ್ಷವಾರು ಖರ್ಚುಗಳ ಸ್ಪಷ್ಟ ಮಾಹಿತಿ ಒದಗಿಸುವುದು)

## ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಗೆ ಮಂಜೂರಾದ ಹಣ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೫ (೫೪೦) ಮಾನ್ಯ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಿದ್ದ ೨೦ ಕೋಟಿ ರೂಪಾಯಿಗಳು ಖರ್ಚು ಮಾಡಲಾಗಿದೆಯೇ; ಅಥವಾ ಕಾರ್ಖಾನೆಯ ಖಾತೆಯಲ್ಲಿ ಉಳಿದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಖರ್ಚಾಗಿದ್ದಲ್ಲಿ, ಯಾವ ಉದ್ದೇಶಕ್ಕಾಗಿ/ಕಾರ್ಯಕ್ಕಾಗಿ ಈ ಹಣವನ್ನು ಖರ್ಚು ಮಾಡಲಾಗಿದೆ; (ವಿವರ ನೀಡುವುದು)

(ಇ) ಹಣವು ಖರ್ಚಾಗದೆ ಬಾಕಿ ಉಳಿದಿದ್ದಲ್ಲಿ ಉಳಿದಿರುವ ಹಣದಲ್ಲಿ ರೈತರಿಗೆ ಕಬ್ಬಿನ ಬಾಕಿ ಹಣವನ್ನು ಪಾವತಿಸಲು ಸರ್ಕಾರ ಕ್ರಮಕೈಗೊಳ್ಳುವುದೇ? (ಮಾಹಿತಿ ನೀಡುವುದು)

## ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡಗಳಿಗೆ ಕೈಗಾರಿಕಾ ಮಂಡಳಿ ವತಿಯಿಂದ ಜಮೀನು ಮಂಜೂರಾತಿ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೬ (೫೪೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳಿಗೆ ಮಂಜೂರು ಮಾಡಲಾದ ನಿವೇಶನ, ಜಮೀನುಗಳಿಗೆ ಅರ್ಧ ಭಾಗದಷ್ಟು ಸಹಾಯಧನ ನೀಡುವ ಕಾರ್ಯಕ್ರಮ ಇದೆಯೇ;

(ಆ) ಈ ರಿಯಾಯಿತಿಯನ್ನು ಯಾವ ದಿನಾಂಕದಿಂದ ನೀಡಲಾಗುತ್ತಿದೆ; ಇದುವರೆವಿಗೂ ರಿಯಾಯಿತಿ ಪಡೆದಿರುವವರ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಇ) ಈ ನಿಟ್ಟಿನಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ನೀಡಬೇಕಾದ ಸಹಾಯಧನದ ಬಾಕಿ ಮೊತ್ತ ಎಷ್ಟು; ಯಾವ ಯಾವ ಫಲಾನುಭವಿಗಳಿಗೆ ರಿಯಾಯಿತಿ ನೀಡಲು ಬಾಕಿ ಇದೆ? (ಮಾಹಿತಿ ನೀಡುವುದು)

## ೩೭೧(ಜೆ) ಅಡಿಯಲ್ಲಿ ಮೀಸಲಿಟ್ಟಿರುವ ಹುದ್ದೆಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೭ (೫೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಲ್ಲಿ ಸರ್ಕಾರಿ ಇಲಾಖೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು, ವೃಂದವಾರು, ಜಿಲ್ಲಾವಾರು, ಸಂಪೂರ್ಣ ಮಾಹಿತಿ ನೀಡುವುದು)

(ಆ) ಅನುಚ್ಛೇದ ೩೭೧(ಜೆ) ಅಡಿಯಲ್ಲಿ ಮೀಸಲಿಟ್ಟ ಹುದ್ದೆಗಳ ಸಂಖ್ಯೆ ಎಷ್ಟು; ಹೈದ್ರಾಬಾದ್–ಕರ್ನಾಟಕ ಪ್ರದೇಶ ಹೊರತುಪಡಿಸಿ ರಾಜ್ಯದ ಇತರ ಜಿಲ್ಲೆಗಳಲ್ಲಿ ಮೀಸಲಿಟ್ಟಿರುವ ಹುದ್ದೆಗಳೆಷ್ಟು; (ಇಲಾಖಾ/ ವೃಂದ/ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಅನುಚ್ಛೇದ ೩೭೧(ಜೆ) ಅಡಿಯಲ್ಲಿ ಬಡ್ತಿ ಪ್ರಕ್ರಿಯೆಯಲ್ಲಿ ಗೊಂದಲವುಂಟಾಗಿ ಬಡ್ತಿ ಪ್ರಕ್ರಿಯೆ ಸ್ಥಗಿತಗೊಂಡಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಪ್ರಕ್ರಿಯೆಯನ್ನು ಮತ್ತೆ ಪ್ರಾರಂಭಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ರಾಜ್ಯದ ಖಜಾನೆಯಿಂದ ಕಳವು ಆಗಿರುವ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೮ (೧೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನ ಆರ್ಥಿಕ ವರ್ಷದಲ್ಲಿ ರಾಜ್ಯದ ಖಜಾನೆಯಿಂದ ರೂ.೧೮.೧೧ ಕೋಟಿ ಕಳವು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯಾಗಿ ಸರ್ಕಾರದ ಖಜಾನೆಯಿಂದಲೇ ಕಳವು ಮಾಡಲು ಅವಕಾಶ ದೊರೆತ್ತಿದ್ದು ಹೇಗೆ; (ವಿವರ ನೀಡುವುದು)

(ಆ) ಈ ಪ್ರಕರಣದ ಬಗ್ಗೆ ಯಾವ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ; ಇದುವರೆಗೂ ದೂರು ದಾಖಲಾಗದಿದ್ದಲ್ಲಿ ದೂರು ಯಾವಾಗ ದಾಖಲಿಸಲಾಗುವುದು; ಈ ಬಗ್ಗೆ ತನಿಖೆ ಕೈಗೊಂಡು ಆರೋಪಿಗಳನ್ನು ಹಿಡಿದು ಶಿಕ್ಷಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಇ) ೨೦೧೬–೧೭ನೇ ಸಾಲಿನ ಆರ್ಥಿಕ ವರ್ಷದಲ್ಲಿ ರಾಜ್ಯದ ಖಜಾನೆಯಿಂದ ರೂ.೧೮.೧೧ ಕೋಟಿ ಕಳವು ಆಗಿರುವ ಬಗ್ಗೆ ಸಿ.ಎ.ಜಿ., ವರದಿಯಲ್ಲಿ ನಮೂದಿಸಿದ್ದು ಕಳವು ಮಾಡಿರುವ ಇಲಾಖಾ ಮುಖ್ಯಸ್ಥರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಬಗ್ಗೆ ಸರ್ಕಾರದ ನಿಲುವೇನು?

## ಆಯವ್ಯಯದಂತೆ ಹಂಚಿಕೆ ಮಾಡಿರುವ ಮೊತ್ತ ಬಿಡುಗಡೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೯(೧೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಸಾಲಿನ ಆರ್ಥಿಕ ವರ್ಷದಲ್ಲಿ ಇದುವರೆಗೆ ಯಾವ ಯಾವ ಇಲಾಖೆಯಲ್ಲಿ ಆಯವ್ಯಯದಂತೆ ಹಂಚಿಕೆ ಮಾಡಿರುವ ಮೊತ್ತವನ್ನು ಈಗಾಗಲೇ ಬಿಡುಗಡೆಯಾಗಿರುವ ೧ ಮತ್ತು ೨ನೇ ಕಂತಿನ ಹಣದ ಶೇ ೭೫ರಷ್ಟನ್ನು ದಿನಾಂಕ:: ೩೧–೦೧–೨೦೧೯ ರವರೆಗೂ ವೆಚ್ಚ ಮಾಡಲು ಸಾಧ್ಯವಾಗಿಲ್ಲ; (ಇಲಾಖಾವಾರು ವಿವರ ನೀಡುವುದು)

(ಆ) ಬಿಡುಗಡೆಯಾಗಿರುವ ೧ ಮತ್ತು ೨ನೇ ಕಂತಿನ ಹಣದ ಶೇ ೭೫ರಷ್ಟನ್ನು ವೆಚ್ಚ ಮಾಡದೇ ಇದ್ದರೂ ಸರ್ಕಾರವು ಯಾವ ಯಾವ ಇಲಾಖೆಗಳಿಗೆ ೩ ಮತ್ತು ೪ನೇ ಕಂತಿನ ಹಣವನ್ನು ಬಿಡುಗಡೆಗೊಳಿಸಿದೆ; (ಇಲಾಖಾವಾರು ವಿವರ ನೀಡುವುದು)

(ಇ) ಯಾವ ಯಾವ ಇಲಾಖೆಗಳು ಸರ್ಕಾರವು ಬಿಡುಗಡೆ ಮಾಡಿದ ಎಲ್ಲಾ ಅನುದಾನವನ್ನು ವೆಚ್ಚ ಮಾಡಿ ಹೆಚ್ಚುವರಿ ಅನುದಾನವನ್ನು ಕೋರಿ ಮನವಿ ಸಲ್ಲಿಸಿವೆ? (ಇಲಾಖಾವಾರು ವಿವರ ನೀಡುವುದು)

## ಅನಧಿಕೃತ ಮರಳು ಗಣಿಗಾರಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೦ (೧೯೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನಧಿಕೃತ ಮರಳು ಗಣಿಗಾರಿಕೆಯ ಸಂಬಂಧ ಕಳೆದ ೫ ವರ್ಷಗಳಲ್ಲಿ ದಾಖಲಾದ ಪ್ರಕರಣಗಳೆಷ್ಟು ; ಎಷ್ಟು ಪ್ರಕರಣಗಳಲ್ಲಿ

ಶಿಕ್ಷೆಯಾಗಿದೆ ; ಅಕ್ರಮ ಮರಳು ಗಣಿಗಾರಿಕೆ ತಡೆಯುವಾಗ ಹಲ್ಲೆಗೊಳಗಾದ ಸರ್ಕಾರಿ ಅಧಿಕಾರಿಗಳ ಸಂಖ್ಯೆ ಎಷ್ಟು ; ಅಕ್ರಮ ಮರಳು ಗಣಿಗಾರಿಕೆ ತಡೆಯುವಾಗ ಮೃತರಾದ ಸರ್ಕಾರಿ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ಯಾದಗಿರಿ ಜಿಲ್ಲೆಯಲ್ಲಿ ಮರಳು ಗಣಿಗಾರಿಕೆಗೆ ಎಷ್ಟು ಲೈಸೆನ್ಸ್ ನೀಡಲಾಗಿದೆ ಮತ್ತು ಅವು ಯಾವುವು ಮತ್ತು ಯಾರ ಹೆಸರಿನಲ್ಲಿವೆ; (ವಿವರ ನೀಡುವುದು)

(ಇ) ಯಾದಗಿರಿ ಜಿಲ್ಲೆಯಲ್ಲಿ ೨೫ ಕ್ಕೂ ಹೆಚ್ಚು ಅಕ್ರಮ ಮರಳು ಗಣಿಗಾರಿಕೆ ಘಟಕಗಳಿರುವುದು ಪತ್ರಿಕೆಯಲ್ಲಿ ವರದಿಯಾಗಿದ್ದು ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದರೂ ನಿರ್ಲಕ್ಷ್ಯ ವಹಿಸಿರುವ ಗಣಿ ಮತ್ತು ಭೂವಿಜ್ಞಾನ, ಪೊಲೀಸ್ ಇಲಾಖೆಯ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## IAS ಮತ್ತು IPS ಅಧಿಕಾರಿಗಳ ಮೇಲಿರುವ ಪ್ರಕರಣಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೧ (೧೯೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಐ.ಎ.ಎಸ್. ಮತ್ತು ಐ.ಪಿ.ಎಸ್., ಅಧಿಕಾರಿಗಳ ಮೇಲೆ ಅಕ್ರಮ ಆಸ್ತಿ ಹೊಂದಿದ ಮತ್ತು ಲಂಚ ಪಡೆದ ಆರೋಪಗಳಿವೆ; (ವಿವರ ನೀಡುವುದು)

(ಆ) ರಾಜ್ಯದ ಎಷ್ಟು ಐ.ಎ.ಎಸ್., ಮತ್ತು ಐ.ಪಿ.ಎಸ್., ಅಧಿಕಾರಿಗಳ ಮೇಲೆ ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ ; ಪ್ರಸ್ತುತ ಅವು ಯಾವ ಹಂತದಲ್ಲಿವೆ ;

(ಇ) ಕೇಂದ್ರ ಸರ್ಕಾರ ಇತ್ತೀಚೆಗೆ ಲಂಚ ಪಡೆದ ಹಾಗೂ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿದ ಆರೋಪ ಇರುವ ಐ.ಎ.ಎಸ್., ಮತ್ತು ಐ.ಪಿ.ಎಸ್., ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಯ ಮೇಲೆ ಕಳುಹಿಸಿದಂತೆ ರಾಜ್ಯ ಸರ್ಕಾರವು ಲಂಚ ಪಡೆದ ಹಾಗೂ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿದ ಆರೋಪ ಇರುವ ಐ.ಎ.ಎಸ್., ಮತ್ತು ಐ.ಪಿ.ಎಸ್., ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಯ ಮೇಲೆ ಕಳುಹಿಸುವ ಕುರಿತು ಸರ್ಕಾರದ ನಿಲುವೇನು ?

## ಶಿವಮೊಗ್ಗ ದೇವಕಾತಿ ಕೈಗಾರಿಕ ಪ್ರದೇಶದಲ್ಲಿ ಕೈಗಾರಿಕೆಗಳು ಸ್ಥಾಪನೆಯಾಗದಿರುವುದು

**ಶ್ರೀ ಎಸ್. ರುದ್ರೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೩೨ (೨೦೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗದಿಂದ ಸಾಗರ ರಸ್ತೆ ಮಾರ್ಗದ ಹೊರವಲಯದಲ್ಲಿ ೨೦೧೨ ರಲ್ಲಿಯೇ ಸ್ಥಾಪಿತವಾಗಿರುವ ದೇವಕಾತಿಕೊಪ್ಪ ಕೈಗಾರಿಕಾ ವಸಾಹತು ಪ್ರದೇಶದಲ್ಲಿ ಈವರೆಗೆ ಯಾವುದೇ ಕೈಗಾರಿಕೆಗಳು ಸ್ಥಾಪನೆಯಾಗಿರುವುದಿಲ್ಲವೇಕೆ ; (ಈ ಬಗ್ಗೆ ಮಾಹಿತಿ ನೀಡುವುದು)

(ಆ) ಯಾವ ಕಾರಣಕ್ಕಾಗಿ ಕೈಗಾರಿಕೆ ವಸಾಹತುವಿನಲ್ಲಿ ಕೈಗಾರಿಕೆಗಳು ಸ್ಥಾಪಿತವಾಗಿರುವುದಿಲ್ಲ ?

## ಸರ್ಕಾರದ ಇಲಾಖಾವಾರು ಹುದ್ದೆ ಮತ್ತು ಕೆ.ಪಿ.ಎಸ್.ಸಿ. ಮಾಹಿತಿ

**ಶ್ರೀ ಎಸ್. ರುದ್ರೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩೩ (೨೦೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಇಲಾಖಾವಾರು ಮಂಜೂರಾದ ಹುದ್ದೆಗಳೆಷ್ಟು; (ವಿವರಗಳನ್ನು ಒದಗಿಸುವುದು)

(ಆ) ಗ್ರೂಪ್ 'ಎ' 'ಬಿ' ಮತ್ತು 'ಸಿ' 'ಡಿ' ಹುದ್ದೆಗಳ ಇಲಾಖಾವಾರು ಖಾಲಿ ಇರುವ ಹುದ್ದೆಗಳೆಷ್ಟು ; (ವಿವರ ಒದಗಿಸುವುದು) ಈ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ;

(ಇ) ರಾಜ್ಯ ಸರ್ಕಾರದಲ್ಲಿ ನಿಯಮಿತವಾಗಿ ನೇಮಕ ಮಾಡುವ ನಿಯಮ ಇದೆಯೇ ;

(ಈ) ಕರ್ನಾಟಕ ಲೋಕಸೇವಾ ಆಯೋಗವನ್ನು ಹೊರತುಪಡಿಸಿ ಇರುವ ನೇಮಕಾತಿ ಸಂಸ್ಥೆಗಳಾವುವು ;

(ಉ) ರಾಜ್ಯ ಸರ್ಕಾರದ ಹುದ್ದೆಗಳಿಗೆ ನೇಮಕ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಂತಹ ಸಾಂವಿಧಾನಿಕ ಸಂಸ್ಥೆ ಮತ್ತು ಎಲ್ಲಾ ಸೌಕರ್ಯಗಳಿದ್ದರೂ, ಇತರೆ ಸಂಸ್ಥೆಗಳಿಂದ ನೇಮಕ ಮಾಡುತ್ತಿರುವ ಉದ್ದೇಶವೇನು ;

(ಊ) ಯಾವ ಕಾರಣಕ್ಕಾಗಿ ನೇಮಕಾತಿ ಪ್ರಕಿಯೆಗೆ ಬೇರೆ ಬೇರೆ ಸಂಸ್ಥೆಗಳನ್ನು ಪ್ರೋತ್ಸಾಹಿಸಲಾಗುತ್ತಿದೆ ?

# ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಷರತ್ತು ಸಡಿಲಿಕೆ ಬಗ್ಗೆ

**ಶ್ರೀ ಪಿ. ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು) :–**

೩೩೪ (೫೩೫) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ) ದ ಸ್ಪೆಷಲ್ ಇನ್ಸೆಂಟೀವ್ ಸ್ಕೀಮ್ ಅಡಿಯಲ್ಲಿ ಷರತ್ತು ಸಡಿಲಿಸಿ ಖಾಲಿ ನಿವೇಶನಗಳಿಗೆ ಕ್ರಯ ಪತ್ರ ನೀಡಲು ಸರ್ಕಾರ ನಿರ್ದೇಶಿಸಿರುವ ೨೦೧೦ ರ ಬಗ್ಗೆ ಮಾಹಿತಿ ನೀಡುವುದು; ಈ ಬಗ್ಗೆ ಕೆ.ಎಸ್.ಎಸ್.ಐ.ಡಿ.ಸಿ. ಸಭೆಯ ೩೧೫, ೩೧೬ ಮತ್ತು ೩೧೮ ರ ನಡವಳಿಕೆ ಜೊತೆಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ದಿನಾಂಕ: ೨೧.೧೧.೨೦೧೪ ರಂದು ನಡೆಸಿದ ಸಭೆಯ ನಡವಳಿಕೆಗಳ ಮಾಹಿತಿ ಹಾಗೂ ಇದಕ್ಕೆ ಸಂಬಂಧಿಸಿದ ಎ.ಜಿ. ಆಡಿಟ್ ಹಾಗೂ ಕಾನೂನು ಅಭಿಪ್ರಾಯ ಇದ್ದಲ್ಲಿ, ಅವುಗಳ ಮಾಹಿತಿ ಮತ್ತು ದಾಖಲೆಗಳನ್ನು ಒದಗಿಸುವುದು ;

(ಆ) ಅರ್ಜಿದಾರರು In principle Loan Sanction letter ಸಮೇತ ದಿನಾಂಕ: ೩೧.೧೨.೨೦೧೦ ರವರೆಗೆ ಸಲ್ಲಿಸಿರುವ ೫೯೩ ಪ್ರಕರಣಗಳ ಪೈಕಿ ೨೮೩ ಪ್ರಕರಣಗಳ ಕ್ರಯ ಪತ್ರಗಳನ್ನು ನಿರ್ವಹಿಸಿಕೊಡಲಾಗಿದ್ದು, ನಿಗಧಿತ ದಿನಾಂಕದೊಳಗೆ ಅರ್ಜಿಯನ್ನು ಸಲ್ಲಿಸಿದ್ದಾಗ್ಯೂ, ಸದರಿ ಅವಧಿಯಲ್ಲಿ ಕ್ರಯಪತ್ರ ನಿರ್ವಹಿಸದಿರುವ ೩೧೦ ಪ್ರಕರಣಗಳು ಬಾಕಿ ಇರುವುದು ನಿಜವೇ;

(ಇ) ಅವುಗಳಲ್ಲಿ ೯೧ ಪ್ರಕರಣಗಳಲ್ಲಿ ನಿಗಮದ ನಿಯಮಗಳ ಅನ್ವಯ ಕ್ರಯ ಪತ್ರಗಳನ್ನು ಈಗಾಗಲೇ ನೀಡಲಾಗಿದ್ದು, ಈ ಎಲ್ಲಾ ಪ್ರಕರಣಗಳಿಗೆ ಸಂಬಂಧಿಸಿದಂತೆ ಹಂಚಿಕೆದಾರರ ಹೆಸರು, ವಿಳಾಸ ಹಾಗೂ ಹಂಚಿಕೆಯಾದ ನಿವೇಶನದ ಸಂಖ್ಯೆ ಹಾಗೂ ಅದರ ವಿಳಾಸದೊಂದಿಗೆ ಮಾಹಿತಿ ನೀಡುವುದು ;

(ಈ) ಉಳಿದ ೨೧೯ ಪ್ರಕರಣಗಳಿಗೆ ಸಂಬಂಧಿಸಿದಂತೆ ಹಂಚಿಕೆದಾರರ ಹೆಸರು, ವಿಳಾಸ, ಹಂಚಿಕೆಯಾದ ನಿವೇಶನದ ಸಂಖ್ಯೆ ಹಾಗೂ ಅದರ ವಿಳಾಸದೊಂದಿಗೆ ಮಾಹಿತಿ ನೀಡುವುದು ;

(ಉ) ಸರ್ಕಾರವು ನಿರ್ದೇಶಿಸಿರುವಂತೆ ಸ್ಪೆಷಲ್ ಇನ್ಸೆಂಟೀವ್ ಸ್ಕೀಮ್ ಅಡಿಯಲ್ಲಿ ಎಷ್ಟು ಪ್ರಕರಣಗಳನ್ನು ಆಡಳಿತ ಮಂಡಳಿಯ ಸಭೆಯಲ್ಲಿ ಮಂಡಿಸಲಾಗಿದೆ ಹಾಗೂ ಇದುವರೆವಿಗೂ ಎಷ್ಟು ಪ್ರಕರಣಗಳ ಬಗ್ಗೆ ಆಡಳಿತ ಮಂಡಳಿಯು ನಿರ್ಣಯಗಳನ್ನು ಕೈಗೊಂಡಿದೆ ; ಉಳಿಕೆ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಬಗ್ಗೆ ಯಾವ ಕ್ರಮಗಳನ್ನು ಇಲ್ಲಿಯವರೆವಿಗೂ ಕೈಗೊಳ್ಳಲಾಗಿದೆ ? (ಕಳೆದ ೫ ವರ್ಷಗಳ ಮಾಹಿತಿ ನೀಡುವುದು)

## ಕೆ.ಎ.ಎಸ್. ಪರೀಕ್ಷೆ ಹಾಗೂ ಮಾನದಂಡಗಳ ಕುರಿತು

**ಶ್ರೀ ಪಿ. ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು) :–**

೩೩೫ (೫೩೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಆಡಳಿತ ಸೇವೆ (ಕೆ.ಎ.ಎಸ್) ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಯಾವ ಯಾವ ಹುದ್ದೆಗಳಿಗೆ ಯಾವ ಆಧಾರದ ಮೇಲೆ ನೇಮಿಸಲಾಗುತ್ತದೆ ;

(ಆ) ಕೆ.ಎ.ಎಸ್/ ಕೆ.ಪಿ.ಎಸ್ ಹುದ್ದೆಯಲ್ಲಿರುವವರು ಪದೋನ್ನತಿ ಹೊಂದಿದಾಗ ಅದನ್ನು ನಿರಾಕರಿಸಿದವರ ಸಂಖ್ಯೆ ಎಷ್ಟು ಹಾಗೂ ಯಾವ ಕಾರಣಕ್ಕಾಗಿ ನಿರಾಕರಿಸಿರುತ್ತಾರೆ ; (ಅಧಿಕಾರಿಗಳ ಹೆಸರು ಮತ್ತು ಹುದ್ದೆಯ ಸಮೇತ ಕಳೆದ ಐದು ವರ್ಷಗಳ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಒಟ್ಟು ಕೆ.ಎ.ಎಸ್/ ಕೆ.ಪಿ.ಎಸ್ ಹಿರಿಯ ಶ್ರೇಣಿ ಮತ್ತು ಕಿರಿಯ ಶ್ರೇಣಿಯ ಅಧಿಕಾರಿಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಕೇಂದ್ರದಿಂದ ರಾಜ್ಯಕ್ಕೆ ಬಂದಿರುವ ಅನುದಾನದ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೩೩೬ (೪೦೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯಕ್ಕೆ ವಿವಿಧ ಯೋಜನೆಗಳಡಿ ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಈ ಅನುದಾನಗಳಲ್ಲಿ ಬಳಕೆಯಾಗಿರುವ ಅನುದಾನ ಎಷ್ಟು ಹಾಗೂ ಹಿಂತಿರುಗಿಸಿರುವ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗದಲ್ಲಿ ಎಲ್ಇಡಿ ಕೈಗಾರಿಕೆ ಸ್ಥಾಪಿಸುವ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೩೩೭ (೪೦೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗದಲ್ಲಿ ಎಲ್ಇಡಿ ಬಲ್ಬ್ ತಯಾರಿಕಾ ಘಟಕ ತೆರೆಯುವ ಬಗ್ಗೆ ಸರ್ಕಾರ ಕಳೆದ ಆಯವ್ಯಯದಲ್ಲಿ ಘೋಷಿಸಿದ್ದ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ಮಾಹಿತಿ ಒದಗಿಸುವುದು)

(ಆ) ಯೋಜನೆಯ ಬಗ್ಗೆ ಸಂಪೂರ್ಣ ಮಾಹತಿ ಒದಗಿಸುವುದು ?

# ವಾಣಿಜ್ಯ ತೆರಿಗೆ ಇಲಾಖೆಯ ನೇರ ನೇಮಕಾತಿ ನೌಕರರಿಗೆ ಬಡ್ತಿಯಲ್ಲಿ ನ್ಯಾಯ ಒದಗಿಸುವ ಬಗ್ಗೆ

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೩೩೮ (೩೬೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೦೧-೦೭-೯೮೪ರ ನಂತರ ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ದಿನಗೂಲಿ ನೌಕರರಾಗಿ ಸೇರಿದ ನೌಕರರಿಗೆ ಸುಪ್ರೀಂಕೋರ್ಟ್ ಆದೇಶ ಸಂಖ್ಯೆ: ಸಿಎ ನಂ: ೩೫೯೫-೩೬೧೨/೧೯೯೯, ದಿನಾಂಕ: ೧೦-೦೪-೨೦೦೬ರಂತೆ ಸಕ್ರಮಾತಿಗೆ ನಿಗದಿಪಡಿಸಿದ್ದ ಮಾನದಂಡಗಳೇನು ;

(ಆ) ಈ ಆದೇಶದ ಪ್ಯಾರಾ ನಂ.೪೬ ರಲ್ಲಿ ವಾಣಿಜ್ಯ ತೆರಿಗೆ ಇಲಾಖೆಗೆ ನಿರ್ದಿಷ್ಟವಾಗಿ ನಿಗದಿಪಡಿಸಲಾಗಿದ್ದ ಮಾನದಂಡಗಳ ವಿರುದ್ಧವಾಗಿ ಸಕ್ರಮಾತಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಕಾರಣಗಳೇನು ;

(ಇ) ಸಕ್ರಮಾತಿಯಲ್ಲಿ ೧೦-೦೪-೨೦೦೬ರ ತೀರ್ಪಿನ ಉಲ್ಲಂಘನೆಯಾಗಿದ್ದು, ಇದನ್ನು ಸರಿಪಡಿಸುವ ಬಗ್ಗೆ ಆರ್ಥಿಕ ಇಲಾಖೆಯ ನಂ. ಆಇ ೯೭ ವಾತೆಸಿ ೨೦೦೮, ದಿನಾಂಕ: ೨೨-೦೪-೨೦೦೮ ರಂದು ಪತ್ರ ಬರೆದಿದೆಯೇ ; ಹಾಗಿದ್ದಲ್ಲಿ, ಸರಿಪಡಿಸಲು ಕೈಗೊಂಡ ಕ್ರಮ ಹಾಗೂ ಪತ್ರದ ಪ್ರತಿ ನೀಡುವುದು;

(ಈ) ಸುಪ್ರೀಂ ಕೋರ್ಟ್ ಆದೇಶ ಉಲ್ಲಂಘಿಸಿ ದಿನಗೂಲಿ ನೌಕರರಿಗೆ ಹಿಂದಿನ ದಿನಾಂಕಕ್ಕೆ ಜೇಷ್ಠತೆಯನ್ನು ನಿಗದಿಪಡಿಸಿ ಸಕ್ರಮಾತಿ ಮಾಡಿರುವ ಲೋಪವನ್ನು ಸರಿಪಡಿಸಬೇಕೆಂದು ಪ್ರಕರಣ ಸಂಖ್ಯೆ: ೧೩೧/೨೦೧೬ (ಸೇವೆ)ರಲ್ಲಿ ಕರ್ನಾಟಕ ರಾಜ್ಯ ಅನುಸೂಚಿತ

ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದಿಂದ ತೀರ್ಪು ನೀಡಿರುವುದು ನಿಜವೇ ; (ಇದ್ದಲ್ಲಿ, ತೀರ್ಪಿನ ಪ್ರತಿ ಒದಗಿಸುವುದು)

(ಉ) ಸದರಿ ಆಯೋಗದ ತೀರ್ಪಿನನ್ವಯ ಕ್ರಮ ಕೈಗೊಳ್ಳಲು ವಾಣಿಜ್ಯ ತೆರಿಗೆ ಇಲಾಖೆಯ ಯಾವ ದಿನಾಂಕದಂದು ಆರ್ಥಿಕ ಇಲಾಖೆಗೆ ಅಭಿಪ್ರಾಯ ಕೋರಿದೆ ; ಅಭಿಪ್ರಾಯ ನೀಡಲು ವಿಳಂಬವಾಗುತ್ತಿರಲು ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಅಭಿಪ್ರಾಯ ನೀಡಿ ನೇರ ನೇಮಕಾತಿಯಾದ ನೌಕರರಿಗೆ ನ್ಯಾಯವನ್ನು ಒದಗಿಸಲಾಗುವುದು ? (ಪ್ರತಿ ನೀಡುವುದು)

## ಬೆಂಗಳೂರು ಮಹಾನಗರದಲ್ಲಿನ ಅಪಾಯಕಾರಿ ಬೀದಿ ದೀಪ ಕಂಬಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

ಽರ್ಙ (೫ರ್ಙ) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರದಲ್ಲಿರುವ ಬೀದಿ ದೀಪಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಸುಸ್ಥಿತಿಯಲ್ಲಿರುವ ಮತ್ತು ದುರಸ್ಥಿಯಲ್ಲಿರುವ ಕಂಬಗಳ ಸಂಖ್ಯೆ ಎಷ್ಟು ; (ವಲಯವಾರು ಮಾಹಿತಿ ನೀಡುವುದು)

(ಆ) ಅತೀ ಅಪಾಯಕಾರಿ ಸ್ಥಿತಿಯಲ್ಲಿರುವ ಕಂಬಗಳ ಸಂಖ್ಯೆ ಎಷ್ಟು ; ಇವುಗಳನ್ನು ದುರಸ್ಥಿಗೊಳಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಕಳೆದ ೦೫ ವರ್ಷಗಳಲ್ಲಿ ನಗರದಲ್ಲಿ ವಿದ್ಯುತ್ ಅವಘಡಗಳಿಂದ ಸಂಭವಿಸಿರುವ ಅನಾಹುತಗಳ ಸಂಖ್ಯೆ ಎಷ್ಟು ; ಅಂತ ಪ್ರಕರಣಗಳಲ್ಲಿ ನೀಡಲಾದ ಪರಿಹಾರ ಕ್ರಮಗಳೇನು ; (ವಲಯವಾರು ಮಾಹಿತಿ ನೀಡುವುದು)

(ಈ) ವಿದ್ಯುತ್ ಅವಘಡಗಳು ಸಂಭವಿಸಿದ ಮೇಲೆಯೂ ನಗರದಲ್ಲಿರುವ ಅಪಾಯಕಾರಿ ಸ್ಥಿತಿಯಲ್ಲಿರುವ ಬೀದಿ ದೀಪಗಳ ಕಂಬಗಳನ್ನು ಪತ್ತೆ ಮಾಡಿ ದುರಸ್ಥಿಗೊಳಿಸಿ ಯಾವುದೇ ಅನಾಹುತ ಸಂಭವಿಸದಂತಾಗಲು ಸರ್ಕಾರ ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯಿಂದ ಪಡೆದಿರುವ ಸಾಲದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೩೪೦ (೧೯೨) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೫೭ ರಿಂದ ೨೦೦೧ರವರೆಗೆ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯಿಂದ ವಿವಿಧ ಯೋಜನೆಗಳಡಿಯಲ್ಲಿ ನೀಡಿರುವ ಸಾಲ ಎಷ್ಟು ; (ವಿವರ ನೀಡುವುದು)

(ಆ) ಈ ಎಲ್ಲಾ ಯೋಜನೆಯಲ್ಲಿನ ಸಾಲದ ಮೇಲೆ ಬೆಳೆದಿರುವ ಬಡ್ಡಿ ಮೊತ್ತ ಎಷ್ಟು ;

(ಇ) ಈ ಸಾಲವನ್ನು ಮನ್ನಾ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಈ) ಇದ್ದಲ್ಲಿ, ಯಾವಾಗ ಮನ್ನಾ ಮಾಡಲಾಗುವುದು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಬಸ್ ನಿಲ್ದಾಣಗಳಲ್ಲಿ ಮೂಲಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೪೧ (೩೬೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿನ ಬಸ್ ನಿಲ್ದಾಣಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗಿದೆಯೇ ; (ವಿವರ ನೀಡುವುದು) ಇಲ್ಲವಾದಲ್ಲಿ, ಯಾವಾಗ ಸದರಿ ಸೌಲಭ್ಯವನ್ನು ಕಲ್ಪಿಸಲಾಗುವುದು ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿನ ಬಸ್ ನಿಲ್ದಾಣಗಳಲ್ಲಿ ಧೂಮಪಾನ ನಿಷೇಧಕ್ಕೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿನ ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆಯನ್ನು ಕಾಪಾಡಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಹೈ-ಟೆನ್ಷನ್ ವಿದ್ಯುತ್ ತಂತಿ ಮಾರ್ಗದಲ್ಲಿನ ಅವಘಡಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೪೨ (೩೬೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿ ಹೈ-ಟೆನ್ಷನ್ ವಿದ್ಯುತ್ ತಂತಿ ಮಾರ್ಗ ಹಾದು ಹೋಗಿರುವ ಒಟ್ಟು ಉದ್ದ ಎಷ್ಟು ; ಈ ಹೈ-ಟೆನ್ಷನ್

ವಿದ್ಯುತ್ ತಂತಿ ಹಾದು ಹೋಗಿರುವ ಭೂಮಿಯು ಯಾರ ಒಡೆತನದ್ದಾಗಿರುತ್ತದೆ ; (ವಿವರ ನೀಡುವುದು)

(ಆ) ಹೈ–ಟೆನ್ಷನ್ ವಿದ್ಯುತ್ ತಂತಿಗಳನ್ನು ಅಳವಡಿಸುವ ಸಂದರ್ಭದಲ್ಲಿ ಅಲ್ಲಿನ ಭೂಮಾಲೀಕರಿಗೆ ಪರಹಾರವನ್ನು ನೀಡಲಾಗುವುದೆ; ಇದ್ದಲ್ಲಿ, ಪರಿಹಾರದ ಮೊತ್ತ ನೀಡಿದ ನಂತರ ಭೂಮಿಯನ್ನು ಇಂಧನ ಇಲಾಖೆಯು ತನ್ನ ವಶಕ್ಕೆ ಪಡೆಯದಿರಲು ಕಾರಣವೇನು;

(ಇ) ಹೈ–ಟೆನ್ಷನ್ ವಿದ್ಯುತ್ ತಂತಿಗಳನ್ನು ಅಳವಡಿಸುವ ಸಂದರ್ಭದಲ್ಲಿ ಭೂಮಿ ಪಡೆಯಲು ಅನುಸರಿಸುವ ಮಾನದಂಡಗಳೇನು ;(ವಿವರ ನೀಡುವುದು)

(ಈ) ಬೆಂಗಳೂರು ನಗರದಲ್ಲಿ ನಿಯಮ ಮೀರಿ ಹೈ–ಟೆನ್ಷನ್ ವಿದ್ಯುತ್ ತಂತಿ ಕೆಳಗೆ ಕಟ್ಟಿರುವ ಕಟ್ಟಡಗಳನ್ನು ತೆರವುಗೊಳಿಸಲು ಬೆಂಗಳೂರು ಮಹಾನಗರ ಪಾಲಿಕೆಯ ಗಮನಕ್ಕೆ ಇಲಾಖೆಯು ಪತ್ರ ವ್ಯವಹಾರ ಅಥವಾ ಸಭೆ ನಡೆಸಲಾಗಿದೆಯೇ ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಮರಳು ಗಣಿಗಾರಿಕೆಯಲ್ಲಿನ ಗೊಂದಲದ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೩ (೩೬೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ನದಿಯ ಮರಳನ್ನು ಸಾರ್ವಜನಿಕರಿಗೆ ನೀಡಲು ಮರಳು ಯಾರ್ಡ್‌ಗಳನ್ನು ಮಾಡಿ ಟೆಂಡರ್ ನೀಡಲಾಗಿದೆಯೇ ; ಇದ್ದಲ್ಲಿ ಅವುಗಳ ಹೆಸರಿನೊಂದಿಗೆ ವಿವರ ನೀಡುವುದು ;

(ಆ) ಜಿಲ್ಲೆಯಲ್ಲಿನ ಸಾರ್ವಜನಿಕ ಮತ್ತು ಸರ್ಕಾರಿ ಕಾಮಗಾರಿಗಳನ್ನು ನಡೆಸಲು ಮರಳನ್ನು ಎಲ್ಲಿಂದ ಮತ್ತು ಯಾವ ರೀತಿಯಲ್ಲಿ ಒದಗಿಸಲಾಗುತ್ತಿದೆ ;

(ಇ) ಈ ಮರಳು ಗಣಿಗಾರಿಕೆ ಮಾಡಲು ಇರುವ ಷರತ್ತು/ ನಿಬಂಧನೆಗಳೇನು ? (ವಿವರ ನೀಡುವುದು)

## ಕಲಬುರಗಿ ರೈಲ್ವೆ ವಿಭಾಗ ಕಛೇರಿ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೩೪೪ (೩೬೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ ರೈಲ್ವೆ ವಿಭಾಗ ಕಛೇರಿ ಮಂಜೂರಾಗಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವಿಭಾಗ ಕಛೇರಿಗೆ ರಾಜ್ಯ ಸರ್ಕಾರ ಜಮೀನು ಮಂಜೂರು ಮಾಡಿದೆಯೇ ; ಮಂಜೂರು ಮಾಡಿದ್ದಲ್ಲಿ, ಎಷ್ಟು ಎಕರೆ ಜಮೀನು ಮಂಜೂರು ಮಾಡಲಾಗಿದೆ ;

(ಇ) ಈ ಜಮೀನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆಯೇ ; ಹಸ್ತಾಂತರಿಸಿದ್ದಲ್ಲಿ, ಯಾವಾಗ ಹಸ್ತಾಂತರಿಸಲಾಯಿತು ;

(ಈ) ರೈಲ್ವೆ ವಿಭಾಗ ಮಂಜೂರು ಮಾಡಿದ್ದರೂ ಅದು ಕಾರ್ಯರಂಭವಾಗದಿರುವುದಕ್ಕೆ ಕಾರಣವೇನು ; (ವಿವರ ನೀಡುವುದು)

(ಉ) ರೈಲ್ವೆ ವಿಭಾಗ ಮಂಜೂರಾತಿಗಾಗಿ ಕೇಂದ್ರದ ಮೇಲೆ ಒತ್ತಡ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರಿನಿಂದ ಮಡಿಕೇರಿಗೆ ಪ್ರತಿನಿತ್ಯ ಸ್ಲೀಪರ್ ಬಸ್ ಸೇವೆಯನ್ನು ಒದಗಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೪೫ (೫೩೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಿಂದ ಮಡಿಕೇರಿಗೆ ಹಾಗೂ ಮಡಿಕೇರಿಯಿಂದ ಬೆಂಗಳೂರಿಗೆ ಪ್ರತಿನಿತ್ಯ ರಾತ್ರಿ ವೇಳೆ ಸ್ಲೀಪರ್ ಕೋಚ್ ಬಸ್ ಸೇವೆ ಸೌಲಭ್ಯ ಇಲ್ಲದಿರುವುದರಿಂದ ವಿಶೇಷವಾಗಿ ವೃದ್ಧರು ಹಾಗೂ ಮಹಿಳೆಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರತಿನಿತ್ಯ ರಾತ್ರಿ ವೇಳೆ ಬೆಂಗಳೂರಿನಿಂದ (ಮೆಜೆಸ್ಟಿಕ್ ನಿಲ್ದಾಣದಿಂದ) ಮಡಿಕೇರಿಗೆ ಹಾಗೂ ಮಡಿಕೇರಿಯಿಂದ ಬೆಂಗಳೂರಿಗೆ (ಮೆಜೆಸ್ಟಿಕ್ ನಿಲ್ದಾಣಕ್ಕೆ) ತಲುಪುವಂತೆ ಸ್ಲೀಪರ್ ಕೋಚ್ ಬಸ್ ಸೇವೆಯನ್ನು ಕಲ್ಪಿಸಲಾಗುವುದೇ ;

(ಇ) ಯಾವ ಕಾಲಮಿತಿಯೊಳಗೆ ಸದರಿ ಸೇವೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು ?

## ಹೈದರಾಬಾದ್–ಕರ್ನಾಟಕ ೩೭೧ಜೆ ಕಲಂ ಅಡಿಯಲ್ಲಿ ಹುದ್ದೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೬ (೫೩೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ೩೭೧ಜೆ ಕಲಂ ಅಡಿಯಲ್ಲಿ ಬೀದರ್ ಜಿಲ್ಲೆ ಹಾಗೂ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಜನರಿಗೆ ಉದ್ಯೋಗ

ದೊರತಿದೆ ; (ಎಲ್ಲಾ ಇಲಾಖೆಯನ್ನು ಒಳಗೊಂಡು ತಾಲ್ಲೂಕುವಾರು ವಿವರ ನೀಡುವುದು)

(ಆ) ಹೈದರಾಬಾದ್-ಕರ್ನಾಟಕ ಭಾಗದಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; (ಇಲಾಖಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವಾಗ ಭರ್ತಿ ಮಾಡಲಾಗುವುದು?

## ವಿವಿಧ ಉದ್ದೇಶಗಳಿಗಾಗಿ ಸರ್ಕಾರಿ ಭೂಮಿ ಹಂಚಿರುವ ಪ್ರಕರಣಗಳು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-**

೩೪೭ (೨೦೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ದಿನಾಂಕ: ೩೦-೦೫-೨೦೦೮ ರಿಂದ ೧೨-೦೫-೨೦೧೩ರ ಅವಧಿಯಲ್ಲಿ ಅಧಿಕಾರದಲ್ಲಿದ್ದ ಸರ್ಕಾರ ಯಾವ ಯಾವ ಉದ್ದೇಶಗಳಿಗಾಗಿ ಸರ್ಕಾರಿ ಭೂಮಿಯನ್ನು ಹಂಚಿಕೆ ಮಾಡಿದೆ ;

(ಆ) ಯಾವ ಯಾವ ಕಂಪನಿಗಳಿಗೆ ಎಷ್ಟು ವಿಸ್ತೀರ್ಣಗಳಲ್ಲಿ, ಯಾವ ಷರತ್ತಿಗೊಳಪಟ್ಟು ಹಂಚಿಕೆ ಮಾಡಿದೆ ;

(ಇ) ಸರ್ಕಾರದ ಉದ್ದೇಶಗಳು ಸದ್ಬಳಕೆಯಾಗಿವೆಯೇ ; ಒಂದು ವೇಳೆ ಉದ್ದೇಶಗಳು ಅಥವಾ ಷರತ್ತುಗಳು ಉಲ್ಲಂಘನೆಯಾಗಿದ್ದ ಸಂದರ್ಭದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

# ದಿನಗೂಲಿ ನೌಕರರಿಗೆ ಉಪಧನ ಪಾವತಿ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೩೪೮ (೩೫೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಸುತ್ತೋಲೆ ಸಂಖ್ಯೆ ಕಾಇ : ೫೮ ಎಲ್‌ಡಬ್ಲೂಎ ದಿನಾಂಕ : ೧೩–೧೦–೨೦೧೬ರ ಉಪಧನ ಪಾವತಿ ಕಾಯ್ದೆ ೧೯೭೨ ರಡಿ ಕಲಂ ೨(ಇ) ಪ್ರಕಾರ ರಾಜ್ಯ ಸರ್ಕಾರದ ದಿನಗೂಲಿ ನೌಕರರಿಗೆ ಕಲಂ ೪(೧)ರ ಪ್ರಕಾರ ೫ ವರ್ಷಗಳ ನಿರಂತರ ಸೇವೆಯನ್ನು ಸಲ್ಲಿಸಿ ಹೊರಬಂದ ನೌಕರರಿಗೆ ಉಪಧನ ಪಾವತಿಯನ್ನು ಮಾಡುವಂತೆ ಆದೇಶಿಸಿರುವುದು ನಿಜವೇ ;

(ಆ) ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ : ೧೪೬ : ಸೇಸ್ಥಅ ೨೦೧೫, ದಿನಾಂಕ : ೧೬–೦೫–೨೦೧೯ ರಲ್ಲಿ ಹೊರಡಿಸಿರುವ ಅಧಿಸೂಚನೆಯಂತೆ ಅಧಿನಿಯಮದಡಿ ಅಧಿಸೂಚಿಸಲ್ಪಟ್ಟ ದಿನಗೂಲಿ ನೌಕರರಿಗೆ ಮಾತ್ರ ಉಪಧನ ಪಾವತಿಗೆ ಅರ್ಹರಿರುತ್ತಾರೆಂದು ಆದೇಶಿಸಿರುವುದು ಸಮಂಜಸವೇ ;

(ಇ) ಈ ಆದೇಶದಿಂದ ಅಧಿಸೂಚಿಸಲ್ಪಟ್ಟ ನೌಕರರನ್ನು ಹೊರತುಪಡಿಸಿ ಈ ಹಿಂದೆ ೨೫–೩೦ ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತಿ ಅಥವಾ ಮರಣ ಹೊಂದಿದ ದಿನಗೂಲಿ ನೌಕರರು ಉಪಧನ ಪಾವತಿಯಿಂದ ವಂಚಿತರಾಗುವುದಿಲ್ಲವೇ ;

(ಈ) ಎರಡು ಇಲಾಖೆಗಳ ವಿಭಿನ್ನ ಆದೇಶಗಳಿಂದ ಉಪಧನ ಪಾವತಿ ಮಾಡಲು ಇಲಾಖೆಗಳು ಗೊಂದಲಕ್ಕೀಡಾಗುವುದಿಲ್ಲವೇ ;

(ಉ) ಹಾಗಿದ್ದಲ್ಲಿ, ಉಪಧನ ಪಾವತಿ ಕಾಯ್ದೆ ೧೯೭೨ರಂತೆ ೫ ವರ್ಷ ಮೇಲ್ಪಟ್ಟು ಕಾರ್ಯನಿರ್ವಹಿಸಿ ನಿವೃತ್ತಿ ಅಥವಾ ಮರಣ ಹೊಂದಿದ ದಿನಗೂಲಿ ನೌಕರರಿಗೆ ಉಪಧನ ಪಾವತಿಯನ್ನು ಮಾಡಲು ಆದೇಶ ಹೊರಡಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದೇ ?

## ಮಾನ್ಯತೆ ಪಡೆದ ಪತ್ರಕರ್ತರ ಮಕ್ಕಳ ವಿದ್ಯಾಭ್ಯಾಸದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೪೯ (೩೬೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೆರೆಯ ರಾಜ್ಯವಾದ ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯಲ್ಲಿ ಖಾಸಗಿ ಶಾಲೆಗಳಲ್ಲಿ ಪತ್ರಕರ್ತರ ಮಕ್ಕಳಿಗೆ ಶೇ.೫೦ ರಷ್ಟು ಶುಲ್ಕ ವಿನಾಯಿತಿ ನೀಡುವಂತೆ ಆದೇಶವಾದಂತೆ ನಮ್ಮ ರಾಜ್ಯದಲ್ಲಿಯೂ ಮಾನ್ಯತೆ ಪಡೆದ ಪತ್ರಕರ್ತರಿಗೆ ಇಂತಹ ಸೌಲಭ್ಯ ಒದಗಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಒದಗಿಸಲಾಗುವುದು, ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಆ) ಬೇರೆ–ಬೇರೆ ರಾಜ್ಯಗಳ ಪತ್ರಿಕೆಗಳಾದ ಉರ್ದು, ತೆಲುಗು, ಮರಾಠಿ ಪತ್ರಿಕೆಗಳನ್ನು ಓದುವ ಜನರು ಕರ್ನಾಟಕ ರಾಜ್ಯದಲ್ಲಿದ್ದು, ಇಂತಹ ಪತ್ರಿಕೆಗಳಿಗೆ ರಾಜ್ಯದ ಯೋಜನೆಗಳ ಬಗ್ಗೆ ಜಾಹೀರಾತು ಹೊರಡಿಸಲು ಅವಕಾಶ ನೀಡದಿರಲು ಕಾರಣವೇನು ; ಅವಕಾಶ ನೀಡುವುದಾದರೆ ಯಾವ ಕಾಲಮಿತಿಯೊಳಗೆ ನೀಡಲಾಗುವುದು;

(ಇ) ಕರ್ನಾಟಕದಲ್ಲಿ ಕನ್ನಡ, ಉರ್ದು, ಮರಾಠಿ, ತೆಲುಗು ಪತ್ರಿಕೆಗಳ ಪ್ರಸಾರವಿದ್ದು, ಈ ಪತ್ರಿಕೆಗಳ ವರದಿಗಾರರಿಗೆ ನಿವೇಶನ ಸೌಲಭ್ಯಗಳನ್ನು ಕಲ್ಪಿಸುವ ವಿಚಾರ ಸರ್ಕಾರದ ಮುಂದಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು ;

(ಈ) ಕರ್ನಾಟಕದಲ್ಲಿ ಪ್ರಸಾರವಾಗುತ್ತಿರುವ ಕನ್ನಡ, ಉರ್ದು, ಮರಾಠಿ, ತೆಲುಗು, ಇಂಗ್ಲೀಷ್ ಪತ್ರಿಕೆಗಳ ಎಷ್ಟು ವರದಿಗಾರರಿಗೆ ಮಾನ್ಯತೆ ನೀಡಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೫೦ (೧೮೮) ಮಾನ್ಯ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗೆ ೨೦೧೮–೧೯ನೇ ಸಾಲಿನ ಹಂಗಾಮು ನಡೆಸಲು ೨೦ ಕೋಟಿ ರೂ. ಸಾಲ ನೀಡಿರುವುದು ನಿಜವೇ ; ಹೌದಾದಲ್ಲಿ ಮಾಹಿತಿ ನೀಡುವುದು ;

(ಆ) ಸಾಲ ನೀಡಿರುವ ಹಣ ಸಂಪೂರ್ಣ ಖರ್ಚಾಗಿದೆಯೇ ; ಖರ್ಚಾಗಿದ್ದಲ್ಲಿ, ಯಾವ ಯಾವ ಕಾರ್ಯಕ್ಕೆ ಖರ್ಚು ಮಾಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಸಾರಿಗೆ ಸಂಸ್ಥೆಯಲ್ಲಿ ಬಸ್ ಪ್ರಯಾಣ ದರ ಹೆಚ್ಚಿಸುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೫೧ (೧೯೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಎಂ.ಟಿ.ಸಿ. ಸೇರಿದಂತೆ ಸಾರಿಗೆ ಸಂಸ್ಥೆಯ ಬಸ್ ಪ್ರಯಾಣ ದರ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹೌದಾದಲ್ಲಿ, ಅದಕ್ಕೆ ಕಾರಣಗಳೇನು ;

(ಇ) ನಗರದಲ್ಲಿ ಜನರು ಸಾರ್ವಜನಿಕ ಸಾರಿಗೆ ಬಳಸುವಂತೆ ಪ್ರೋತ್ಸಾಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕೇಂದ್ರ ಸರ್ಕಾರದಿಂದ ಬರುವ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೨ (೪೦೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಯಾವ ಯಾವ ಇಲಾಖೆಗಳಿಗೆ ಎಷ್ಟೆಷ್ಟು ಅನುದಾನ ಬರುತ್ತದೆ ; (ಇಲಾಖಾವಾರು ಸಂಪೂರ್ಣ ಅಂಕಿ ಅಂಶ ನೀಡುವುದು)

(ಆ) ಇವುಗಳಲ್ಲಿ ರಾಜ್ಯ ಸರ್ಕಾರದ ಪಾಲೆಷ್ಟು ; ಕೇಂದ್ರ ಸರ್ಕಾರದ ಪಾಲೆಷ್ಟು ? (ಇಲಾಖಾವಾರು ಸಂಪೂರ್ಣ ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. ೦80/400 ಪ್ರತಿಗಳು/12–07–2019